ಸಂಪುಟ 01 । ಸಂಚಿಕೆ 90 । ಭಾನುವಾರ 15 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
# NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಮಹಾಶಿವರಾತ್ರಿ

ಮಹಾ ಶಿವರಾತ್ರಿ ಹಿಂದೂಗಳ ಪ್ರಮುಖ ಮತ್ತು ಮಂಗಳಕರ ಹಬ್ಬಗಳಲ್ಲಿ ಒಂದಾಗಿದೆ. ವಾರ್ಷಿಕ ಹಬ್ಬವು ಶಿವನನ್ನು ಮತ್ತು ಪಾರ್ವತಿ ದೇವಿಯೊಂದಿಗಿನ ಅವನ ಪವಿತ್ರ ಒಕ್ಕೂಟವನ್ನು ಗೌರವಿಸುತ್ತದೆ. ಶಿವ ಮತ್ತು ಶಕ್ತಿ ಒಟ್ಟಾಗಿ ಪ್ರೀತಿ, ಶಕ್ತಿ ಮತ್ತು ಏಕತೆಯನ್ನು ಪ್ರತಿನಿಧಿಸುತ್ತವೆ, ಸಮ್ಮಿಲನವು ರಾತ್ರಿಯಲ್ಲಿ ನಡೆಯುತ್ತದೆ.

## ಸುಭಾಷಿತ

ಕಡಲತಡಿಯಲ್ಲಿ ನಿಂತು ನೀರನ್ನು ನೋಡುತ್ತ ಕಾಲ ಕಳೆಯುತ್ತಿದ್ದರೆ ಸಮುದ್ರವನ್ನು ದಾಟಲು ಸಾಧ್ಯವಿಲ್ಲ.

ರವೀಂದ್ರನಾಥ ಟ್ಯಾಗೋರ್

## ಹೈಕಮಾಂಡ್ ಕರೆದಾಗ ದೆಹಲಿಗೆ ಹೋಗುತ್ತೇನೆ : ಸಿಎಂ



ಬೆಂಗಳೂರು: ಹೈಕಮಾಂಡ್ ಕರೆದಾಗ ನಾನು ದೆಹಲಿಗೆ ಹೋಗುತ್ತೇನೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು. ಹಾವೇರಿಯಲ್ಲಿಂದು ನಡೆದಿರುವ ರಾಜ್ಯ ಸರ್ಕಾರದ ಸಾವಿರ ದಿನಗಳ ಸಾರ್ಥಕ ಸಮಾವೇಶದಲ್ಲಿ ಪಾಲ್ಗೊಳ್ಳುವ ಮುನ್ನ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಪದೇ ಪದೇ ಪ್ರಶ್ನೆ ಕೇಳುವುದು ಬೇಡ ಎಂದು ಮಾಧ್ಯಮದವರಿಗೆ ಗರಂ ಆಗಿ ಹೇಳಿ, ಹೈಕಮಾಂಡ್ ಏನು ಹೇಳುತ್ತದೋ ಅದನ್ನು ನಾವು ಕೇಳುತ್ತೇವೆ ಎಂದು ಪುನರುಚ್ಚರಿಸಿದರು.

ನಾನು ಸೇರಿದಂತೆ ಪಕ್ಷದಲ್ಲಿರುವ ಎಲ್ಲರೂ ಹೈಕಮಾಂಡ್ ಮಾತನ್ನು ಕೇಳಲೇಬೇಕು ಎಂದರು. ನೀವು ಹೈಕಮಾಂಡ್ ಎಂದು ಹೇಳುತ್ತೀರಿ. ಆದರೆ, ನಿಮ್ಮ ಪಕ್ಷದ ನಾಯಕರೇ ಶ್ರಮಕ್ಕೆ ಫಲ ಸಿಗುತ್ತದೆ ಎಂದು ಟ್ವೀಟ್ ಮಾಡುತ್ತಿದ್ದಾರೆ. ಹಾಗೆಯೇ ಕೆಲ ಶಾಸಕರು ಶಿವರಾತ್ರಿ ನಂತರ ಶುಭಸುದ್ದಿ ಎಂದು ಹೇಳುತ್ತಿದ್ದಾರಲ್ಲಾ ಎಂಬ ಪ್ರಶ್ನೆಗೆ, ಹೈಕಮಾಂಡ್‌ನವರು ಆ ರೀತಿ ಟ್ವೀಟ್ ಮಾಡಿದ್ದಾರಾ, ಹೀಗಿರುವಾಗ ಈ ರೀತಿ ಪ್ರಶ್ನೆಗಳು ಅನಗತ್ಯ ಎಂದರು.

ನಿಮ್ಮ ಪುತ್ರ ಯತೀಂದ್ರ ಸಿದ್ಧರಾಮಯ್ಯ ಅವರು ನಮ್ಮ ತಂದೆಯವರೇ ಐದು ವರ್ಷ ಸಿಎಂ ಎಂದು ಹೇಳುತ್ತಿದ್ದಾರಲ್ಲಾ ಎಂಬ ಪ್ರಶ್ನೆಗೆ ಅದಕ್ಕೆಲ್ಲಾ ನಾನು ಉತ್ತರ ಕೊಡಲ್ಲ. ಹೈಕಮಾಂಡ್‌ನವರು ಕರೆದಾಗ ನಾನು ಹೋಗುತ್ತೇನೆ. ಪದೇ ಪದೇ ಈ ಪ್ರಶ್ನೆ ಕೇಳಬೇಡಿ ಎಂದರು.

ವರದಾ-ಬೇಡ್ತಿ ನದಿ ಜೋಡಣೆ ಬಗ್ಗೆ ಉತ್ತರ ಕನ್ನಡ ಜಿಲ್ಲೆಯವರು ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈ ಪ್ರಸ್ತಾವನೆಯನ್ನು ನಾವು ಕೇಂದ್ರಕ್ಕೆ ಕಳುಹಿಸಿದ್ದೇವೆ. ಕೇಂದ್ರದವರು ಯಾವುದರ ಮೇಲೂ ನಿರ್ಣಯ ಕೊಡುತ್ತಿಲ್ಲ. ಹಾಗಾಗಿ ನಮಗೆ ಕೇಂದ್ರದ ಮೇಲೆ ಭರವಸೆಯೇ ಹೋಗಿದೆ ಎಂದರು.

ಈ ತಿಂಗಳಲ್ಲಿ ಜಾತಿಗಣತಿ ವರದಿ : ಕಳೆದ ಎರಡು ತಿಂಗಳ ಹಿಂದೆ ನಡೆದ ಸಾಮಾಜಿಕ ಹಾಗೂ ಶೈಕ್ಷಣಿಕ ವರದಿಯನ್ನು ಈ ತಿಂಗಳಲ್ಲೇ ಹಿಂದುಳಿದ ವರ್ಗಗಳ ಶಾಶಾತ್ವ ಆಯೋಗ ಸರ್ಕಾರಕ್ಕೆ ಸಲ್ಲಿಸಲಿದೆ ಎಂದು ಅವರು ಹೇಳಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರದ ಸಾಥ-ರ್ಕ ಸಮಾವೇಶವನ್ನು ಬಿಜೆಪಿಯವರು ಟೀಕಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಏನು ಮಾಡಲಿಲ್ಲ. ಹಾಗಾಗಿ ಹೊಟ್ಟೆಕಿಚ್ಚಿನಿಂದ ಟೀಕೆಗಳನ್ನು ಮಾಡುತ್ತಿದ್ದಾರೆ. ಅವರ ಆರೋಪಗಳು ಸುಳ್ಳು ಎಂದರು.

ನಾವು ಈ ಹಿಂದೆ ಅಧಿಕಾರದಲ್ಲಿದ್ದಾಗ ಜನರಿಗೆ ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಈಗಲೂ ನುಡಿದಂತೆ ನಡೆಯುತ್ತಿದ್ದೇವೆ. ಅದೇ ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಅವರು ಕೊಟ್ಟ ಭರವಸೆಯಲ್ಲಿ ಶೇ. 10 ರಷ್ಟು ಭರವಸೆಯನ್ನು ಈಡೇರಿಸರಿಲಿಲ ಹಾಗಾಗಿ ಅವ-ರಿಗೆ ನಮ್ಮನ್ನು ಟೀಕಿಸುವ ನೈತಿಕತೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಬಡವರು,ದಲಿತರು,ಹಿಂದುಳಿದವರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಸಬಲರನ್ನಾಗಿಸಲು ನಾವು ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಅದರಂತೆ ಸಾರ್ಥಕ ಸಮಾವೇಶವನ್ನು ಆಯೋಜಿಸಿದ್ದೇವೆ. ಇಲ್ಲಿಯವರೆಗೂ ಮಾತು ಕೊಟ್ಟಂತೆ ನಡೆದುಕೊಂಡಿದ್ದವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜವಳಿ, ಸಕ್ಕರೆ, ಎಪಿಸಿ ಎಂಸಿ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್, ಕಾನೂನು ಸಚಿವ ಹೆಚ್.ಕೆ.ಪಾಟೀಲ್, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ವಿಧಾನಪರಿಷತ್‌ನ ಮುಖ್ಯ ಸಚೇತಕ ಸಲೀಂ ಅಹಮದ್ ಸೇರಿದಂತೆ ಹಲವು ಶಾಸಕರು, ಸಂಸದರು ಉಪಸ್ಥಿತರಿದ್ದರು.

## ವಂದೇ ಭಾರತ್ ಎಕ್ಸ್‌ಪ್ರೆಸ್‌ನಲ್ಲಿ ಹಾವು ಬಿಟ್ಟ ವ್ಯಕ್ತಿ ಅರೆಸ್ಟ್

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ: ವಿಶ್ವ ಪ್ರಸಿದ್ಧ ಹಂಪಿ ಉತ್ಸವದಲ್ಲಿ ಸರ್ಕಾರಿ ಶಾಲಾ ಮಕ್ಕಳ ಕನಸಿಗೆ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ರೆಕ್ಕೆ ನೀಡಿದ್ದಾರೆ. ಬೈ ಸ್ಕೈ ವೀಕ್ಷಣೆಗೆ ಆಗಮಿಸಿದ್ದ 60ಕ್ಕೂ ಹೆಚ್ಚು ಶಾಲಾ ಮಕ್ಕಳಿಗೆ ಉಚಿತವಾಗಿ ಹೆಲಿಕಾಪ್ಟರ್ ರೈಡ್ ಮಾಡಿಸಿ, ಮಕ್ಕಳ ಕನಸು ನನಸು ಮಾಡಿದ್ದಾರೆ.




ಕಮಲಾಪುರದ ಮಯೂರ ಹೋಟೆಲ್ ಆವರಣದಲ್ಲಿ ಹೆಲಿಕಾಪ್ಟರ್ ನೋಡಲು ಬಂದಿದ್ದ ಸರ್ಕಾರಿ ಶಾಲೆ ಮಕ್ಕಳ ಆಸೆ ಕೇಳಿದ ಸಚಿವರು, ನೀವೂ ಹೆಲಿಕಾಪ್ಟರ್‌ನಲ್ಲಿ ಹೋಗಬೇಕಾ ಎಂದು ಕೇಳಿದ್ದಾರೆ. ಸಚಿವರ ಪ್ರಶ್ನೆಗೆ ಮಕ್ಕಳೆಲ್ಲರೂ ಹೌದು ಸರ್ ಎಂದಿದ್ದಾರೆ. ತಕ್ಷಣವೇ ತಮ್ಮ ಸ್ವಂತ ಖರ್ಚಿನಲ್ಲಿ ಯೂನಿಫಾರ್ಮ್‌ನಲ್ಲಿದ್ದ ಎಲ್ಲಾ ಮಕ್ಕಳಿಗೆ ಸಚಿವರು ರೈಡ್ ವ್ಯವಸ್ಥೆ ಮಾಡಿದ್ದಾರೆ. ಆಕಾಶಕ್ಕೆ ಹಾರಿದ ಮಕ್ಕಳ ಸಂಭ್ರಮ ಕಂಡು ಕೆಳಗಡೆ ನಿಂತಿದ್ದ ಪೋಷಕರು ಆನಂದ ಬಾಷ್ಪ ಸುರಿಸಿದರು. ಮಕ್ಕಳ ಜಾಲಿ ಕಂಡು ಪೋಷಕರೂ ಸಂಭ್ರಮಿಸಿದ್ದಾರೆ.

## ಶಕ್ತಿ,ನಂಬಿಕೆ ಇಲ್ಲದೆ ಯಾವುದೇ ಬದಲಾವಣೆ ಅಸಾಧ್ಯ-ಡಿಕೆಶಿ

ನೈಜ್ಯ ದೆಸೆ ನ್ಯೂಸ್

ತಿಪಟೂರು: ಭಕ್ತನಿಗೂ ಭಗವಂತನಿಗೂ ಸಂಬಂಧ ಬೆಸೆದುಕೊಳ್ಳುವ ಸ್ಥಳ ದೇವಾಲಯವಾಗಿದ್ದು, ಶಕ್ತಿ ಮತ್ತು ನಂಬಿಕೆ ಇಲ್ಲದೆ ಯಾವುದೇ ಬದಲಾವಣೆ ಸಾಧ್ಯವಿಲ್ಲ. ಮರಕ್ಕೆ ಬೇರು ಎಷ್ಟು ಮುಖ್ಯವೋ, ಮನುಷ್ಯನಿಗೆ ನಂಬಿಕೆ ಅಷ್ಟೇ ಮುಖ್ಯ ಆ ನಂಬಿಕೆಯಿಂದಲೇ ನಾವು ಕಾರ್ಯನಿರ್ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ತಾಲ್ಲೂಕಿನ ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದಲ್ಲಿ ಮೂರು ದಿನಗಳ ಕಾಲ ನಡೆದ ಜಾತ್ರಾ ಮಹೋತ್ಸವ ಹಾಗೂ ಕ-ರಿಬಸವಸ್ವಾಮಿಗಳ 233ನೇ ವಾರ್ಷಿಕ ಸರಣೋತ್ಸವದ ಧರ್ಮಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಕಾಡಸಿದ್ದೇಶ್ವರ ಸ್ವಾಮಿಗೆ ಪೂಜೆ ಸಲ್ಲಿಸಿ ಮಠದ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಆರ್ಶೀವಾದ ಪಡೆದು ಮಾತನಾಡಿದ ಅವರು, ಕರ್ನಾಟಕದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು ಇವತ್ತಿಗೆ ಒಂದು ಸಾವಿರ ದಿನಗಳು ಪೂರೈಸಿದ ಹಿನ್ನೆಲೆಯಲ್ಲಿ ಹಾಗೂ ಶ್ರೀಮಠದ ಜಾತ್ರಾ ಮಹೋತ್ಸವ ಅಂಗವಾಗಿ ನಾನು ಭಾಗವಹಿಸಿ ಆರ್ಶೀವಾದವನ್ನು ಪಡೆದಿದ್ದೇನೆ.

ಇಲ್ಲಿಗೆ ಮಠದ ಭಕ್ತನಾಗಿ ಹಾಗೂ ಅಜ್ಜಯ್ಯನ ಶಿಷ್ಯನಾಗಿ ಮಠಕ್ಕೆ ಆಗಮಿಸಿದ್ದು ಅಜ್ಜಯ್ಯನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ ಸಂದರ್ಭದಲ್ಲಿ ಕೆಲವರು ನಗೆಗೆ ಒಳಾಗದರು ಇನ್ನೂ ಕೆಲವರು ಸಂತೋಷಪಟ್ಟರು. ಆದರೆ ಮನುಷ್ಯನಿಗೆ ನಂಬಿಕೆ ಮುಖ್ಯ. ಆ ನಂಬಿಕೆಯ ಮೇಲೇ ನಾನು ಕ್ಷೇತ್ರಕ್ಕೆ ಹಲವಾರು ವರ್ಷಗಳಿಂದ ಬರುತ್ತಿದ್ದೇನೆ ಎಂದರು. ಶಿವರಾತ್ರಿಯ ಹಬ್ಬ ಕಳೆದ ನಂತರ ಶುಭವಾಗಲಿದೆ. ಎಲ್ಲರಿಗೂ ಒಳ್ಳೆಯದಾಗಲಿದೆ. ಮನುಷ್ಯನ ಬದುಕನ್ನು ಶ್ರೇಷ್ಠಗೊಳಿಸಿ, ನೆಮದಿಯಿಂದ ಜೀವನ ಸಾಗಿಸುವುದೇ ನಮ ಗುರಿಯಾಗಿದೆ ಎಂದರು.

ಲಿಂಗಕ್ಕೆ ಆಚಾರವೇ ಆಶ್ರಯ, ಆಚಾರಕ್ಕೆ ಪ್ರಾಣವೇ ಆಶ್ರಯ, ಪ್ರಾಣಕ್ಕೆ ಜ್ಞಾನವೇ ಆಶ್ರಯ, ಜ್ಞಾನಕ್ಕೆ ಲಿಂಗವೇ ಆಶ್ರಯ, ಲಿಂಗಕ್ಕೆ ಜಂಗಮವೇ ಆಶ್ರಯ. ಗುರುವಿನಿಂದಲೇ ಬಂಧುಗಳು, ದೈವಗಳು ಮತ್ತು ಜಗತ್ತಿಗೆ ಪುಣ್ಯ ಸಿಗುತ್ತದೆ ಆದ್ದರಿಂದ ಹಿರಿಯರ ವಾಣಿಯಂತೆ ಮನೆಮಠಗಳನ್ನು ಹೇಗೆ ಕಾಪಾಡಿಕೊಳ್ಳಬೇಕೆಂಬ ಸಂದೇಶವಿರುವಂತೆ, ಈ ಮಠವನ್ನು ಕಾಪಾಡುವುದು ಭಕ್ತರ ಕರ್ತವ್ಯವಾಗಿದೆ ಗುರು ಜಗತ್ತಿನ ಪಾಲಕನಾಗಿದ್ದು, ನಂಬಿಕೆ ಜೀವನದಲ್ಲಿ ಅತ್ಯಂತ ಮುಖ್ಯ ಎಂದು ಹೇಳಿದರು. ಯಾವ ದೇವರು ವರ ಅಥವಾ ಶಾಪ ನೀಡುವುದಿಲ್ಲ. ಅವಕಾಶವನ್ನು ಮಾತ್ರ ನೀಡುತ್ತಾನೆ. ಆ ಅವಕಾಶವನ್ನು ಸದುಪಯೋಗ ಮಾಡಿಕೊಂಡು ಹೃದಯ ಶ್ರೀಮಂತಿಕೆಯಿಂದ ಉತ್ತಮ ಕಾರ್ಯಗಳನ್ನು ಮಾಡಬೇಕು ಎಂದು ಅವರು ತಿಳಿಸಿದರು.

## ಬೀಳಗಿಯಲ್ಲಿ ಕಾರ್ಯಕರ್ತರಸಂಘಟನಾತ್ಮಕ ಕಾರ್ಯಕ್ರಮ.

ನೈಜ್ಯ ದೆಸೆ ನ್ಯೂಸ್

ಬಾಗಲಕೋಟೆ: ಜಿಲ್ಲಾ ಪ್ರವಾಸದ ಅಂಗವಾಗಿ ಬೀಳಗಿಯಲ್ಲಿ ಇಂದು ಆಯೋಜಿಸಲಾಗಿದ್ದ ಕಾರ್ಯಕರ್ತರ ಸಂಘಟನಾತ್ಮಕ ಸಭೆ, ಃಐಂ -2 ಕಾರ್ಯಾಗಾರ ಮತ್ತು ವಿಬಿ-ಜಿ ರಾಮ್ ಜಿ ಜನಜಾಗೃತಿ ಸಭೆಯಲ್ಲಿ ಪಾಲ್ಗೊಳ್ಳಲಾಯಿತು. ಗ್ರಾಮೀಣ ಶಕ್ತಿಯನ್ನು 'ವಿಕಸಿತ ಭಾರತ'ದ ಗುರಿಯೊಂದಿಗೆ ಜೋಡಿಸುವ ನಿಟ್ಟಿನಲ್ಲಿ ಈ ಮಹತ್ವದ ಕಾನೂನಿನ ಬಗ್ಗೆ ನಮ್ಮ ಗ್ರಾಮೀಣ ಜನತೆಗೆ ಮಾಹಿತಿ ನೀಡಿ ಅವರ ಬದುಕಿನಲ್ಲಿ ಪರಿವರ್ತನೆ ಉಂಟುಮಾಡುವುದು ಈ ಕಾರ್ಯಕ್ರಮದ ಪ್ರಮುಖ ಆಶಯವಾಗಿದೆ.



ಪ್ರಧಾನಮಂತ್ರಿ ಶ್ರೀ ಓಚಿಡಿ-ಜಟಿಜಡಿಚಿ ಒಠಜು ಜೀ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಹಳ್ಳಿಗಳ ವಿಕಾಸಕ್ಕೆ ಹೊಸ ವೇಗ ದೊರೆಯುತ್ತಿದ್ದು, ಗ್ರಾಮೀಣ ಭಾಗದಲ್ಲಿ ವಿಶ್ವಾಸ ಮತ್ತು ಭದ್ರತೆಯ ವಾತಾವರಣ ನಿರ್ಮಾಣವಾಗುತ್ತಿದೆ.

ಸಭೆಯಲ್ಲಿ ರಾಜ್ಯಸಭಾ ಸದಸ್ಯರಾದ ಶ್ರೀ ನಾರಾಯಣ ಭಾಂಡಗೆ, ಶಾಸಕ ಶ್ರೀ ಸಿದ್ದು ಸವದಿ, ಪಕ್ಷದ ಉಪಾಧ್ಯಕ್ಷ ಶ್ರೀ ಮುರಗೇಶ್ ನಿರಾಣಿ, ವಿಧಾನ ಪರಿಷತ್ ಸದಸ್ಯ ಶ್ರೀ ಹನುಮಂತ ನಿರಾಣಿ, ಮಾಜಿ ಶಾಸಕರುಗಳಾದ ಶ್ರೀ ಎಂ.ಕೆ.ಪಟ್ಟಣಶೆಟ್ಟಿ, ಶ್ರೀ ಅರುಣ ಶಹಾಪುರ, ಪಕ್ಷದ ರಾಜ್ಯ ಕಾರ್ಯದರ್ಶಿ ಶ್ರೀ ಶರಣು ತಳ್ಳಿಕೇರಿ, ಮತ್ತಿತರ ಮುಖಂಡರು, ಪ್ರಮುಖರು ಉಪಸ್ಥಿತರಿದ್ದರು.

## ಶ್ರೀ ಶರಣ ಕಂಬಾರ ಕಲ್ಲಯ್ಯನವರ ಜಯಂತೋತ್ಸವ ಆಚರಣೆ.

ನೈಜ್ಯ ದೆಸೆ ನ್ಯೂಸ್

ಮುಧೋಳ: ಫೆಬ್ರವರಿ 13: ಮುಧೋಳ ನಗರದ ದಾನಮ್ಮ ಕಲ್ಯಾಣ ಮಂಟಪದಲ್ಲಿ ಇಂದು ಅಬಕಾರಿ ಸಚಿವರು ಹಾಗೂ ಬಾಗಲಕೋಟ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ ಆರ್. ಬಿ. ತಿಮ್ಮಾಪೂರ ಅವರು ಕಂಬಾರ (ಕಮ್ಮಾರ) ಜಿಲ್ಲಾ ಸಮಾವೇಶ ಹಾಗೂ ಶ್ರೀ ಮಹಾಶರಣ ಕಂಬಾರ ಕಲ್ಲಯ್ಯನವರ ಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಸಚಿವರು ಮಾತನಾಡಿ, "ಶ್ರೀ ಮಹಾಶರಣ ಕಂಬಾರ ಕಲ್ಲಯ್ಯನವರು ಕಂಬಾರ ಸಮುದಾಯದ ಆಧ್ಯಾತ್ಮಿಕ ಮತ್ತು ಸಾಮಾಜಿಕ ನಾಯಕರಾಗಿ ಜನರನ್ನು ಒಗ್ಗೂಡಿಸಿ ಸಮಾನತೆಯ ಸಂದೇಶ ನೀಡಿದ್ದರು. ಅವರ ಆದರ್ಶಗಳು ಇಂದಿಗೂ ನಮಗೆ ಪ್ರೇರಣೆಯಾಗಿವೆ. ಕಂಬಾರ ಸಮುದಾಯದ ಶ್ರಮಜೀವಿಗಳು ರಾಜ್ಯದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ಅವರ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿ-ಕ ಸ್ಥಿತಿಯ ಉನ್ನತೀಕರಣಕ್ಕೆ ಸರ್ಕಾರ ಬದ್ಧವಾಗಿದೆ. ಈ ಸಮಾವೇಶದ ಮೂಲಕ ಸಮುದಾಯದ ಒಗ್ಗಟ್ಟು ಇನ್ನಷ್ಟು ಬಲಗೊಳ್ಳಲಿ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಭೀಮನಗೌಡ ಪಾಟೀಲ, ಆನಂದ ಹಟ್ಟಿ, ಜಿಲ್ಲೆಯ ತಾಲೂಕಾಧ್ಯಕ್ಷರಾದ ರಮೇಶ್ ಕಂಬಾರ, ಯಲ್ಲಪ್ಪ ಕಂಬಾರ, ಶ್ರೀಶೈಲ್ ಕಂಬಾರ, ಸಿದ್ದಪ್ಪ ಕಂಬಾರ, ರಾಜು ಕಂಬಾರ, ಭೀಮಶಿ ಕಂಬಾರ, ಬಸವರಾಜ ಕಂಬಾರ, ಮೌನೇಶ್ ಕಂಬಾರ ಸೇರಿದಂತೆ ಹಲವಾರು ಕಂಬಾರ ಸಮುದಾಯದ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಮತ್ತು ಸ್ಥಳೀಯರು ಉಪಸ್ಥಿತರಿದ್ದರು.

## "ಎರಡು ಸಾವಿರ ವಿದ್ಯಾರ್ಥಿಗಳಿಗೆ ವಸತಿ ನಿಲಯ ಮಂಜೂರು: ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ"

ನೈಜ್ಯ ದೆಸೆ ನ್ಯೂಸ್

ಯಲಬುರ್ಗಾ: ಕ್ಷೇತ್ರದ ಶಾಸಕರು ಹಾಗೂ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿಯವರ ಪ್ರಯತ್ನದಿಂದ ಕೇವಲ ಎರಡುವರೆ ವರ್ಷಗಳಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಸಂಭವಿಸಿದೆ ಎಂದು ಯಲಬುರ್ಗಾ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಸುಧೀರ ಕೊರ್ಲಳ್ಳಿ ಅವರು ಹೇಳಿದರು.

ಪಟ್ಟಣದ ಬಯಲು ರಂಗಮಂದಿರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಲಬುರ್ಗಾ ಮತ್ತು ಕುಕನೂರು ತಾಲೂಕುಗಳಲ್ಲಿ ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಲಾಗಿದ್ದು, ಬಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲ ಕಲ್ಪಿಸಲಾಗಿದೆ ಎಂದರು.



ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರಿಗಾಗಿ ಹಿಂದುಳಿದ ವರ್ಗಗಳು ಮತ್ತು ಪರಿಶಿಷ್ಟ ಜಾತಿಗೆ ಸೇರಿರುವ 18 ವಸತಿ ಶಾಲೆಗಳನ್ನು ಮಂಜೂರು ಮಾಡಿಸಲಾಗಿದ್ದು, ಸುಮಾರು ಎರಡು ಸಾವಿರ ವಿದ್ಯಾರ್ಥಿಗಳಿಗೆ ಅವಕಾಶ ದೊರೆತಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಪ್ರೌಢ ಹಾಗೂ ಉನ್ನತ ಶಿಕ್ಷಣದಿಂದ ವಂಚಿತರಾಗಬಾರದೆಂಬ ಉದ್ದೇಶದಿಂದ ಹೈಸ್ಕೂಲುಗಳು, ನರ್ಸಿಂಗ್, ಪಿಜಿ ಹಾಗೂ ಎಂಜಿನಿಯರಿಂಗ್ ಕಾಲೇಜುಗಳೊಂದಿಗೆ ವಸತಿ ಸೌಲಭ್ಯಕ್ಕೂ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

ಕುಕನೂರು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗಮೇಶ ಗುತ್ತಿ ಮಾತನಾಡಿ, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ಆಗಬಾರದೆಂಬ ನಿಟ್ಟಿನಲ್ಲಿ ಶಾಸಕರು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಿರುವುದು ಸಂತೋಷದಾಯಕ. ಪ್ರಸಕ್ತ ಸಾಲಿನಲ್ಲಿ ಬಿಸಿಎಂ ಹಾಗೂ ಸಮಾಜ ಕಲ್ಯಾಣ ಇಲಾಖೆಯಡಿ 18 ವಸತಿ ನಿಲಯಗಳು ಮಂಜೂರಾಗಿದ್ದು, ಇದು ಕ್ಷೇತ್ರಕ್ಕೆ ಸುವರ್ಣಯುಗದ ಹೆಜ್ಜೆಯಾಗಿದೆ ಎಂದರು.

ಮಂಗಳೂರು ಗ್ರಾಮ ಹೊರತುಪಡಿಸಿ ಬಹುತೇಕ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳು ಲಭ್ಯವಾಗಿರುವುದು ಐತಿಹಾಸಿಕ ಕ್ಷಣವಾಗಿದೆ. ಈ ಸಾಧನೆಗೆ ಸಿಎಂ ಸಿದ್ದರಾಮಯ್ಯ ಹಾಗೂ ಶಾಸಕ ಬಸವರಾಜ ರಾಯರೆಡ್ಡಿಯವರಿಗೆ ಅಭಿನಂದನೆ ಸಲ್ಲಿಸಿದರು. ಕೊಪ್ಪಳ ವಿಶ್ವವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಎಸ್.ಬಿ. ಡಾಣಿ, ತಹಶೀಲ್ದಾರ ಪ್ರಕಾಶ ನಾಶಿ, ಬಿಸಿಎಂ ಅಧಿಕಾರಿ ಶಿವಶಂಕರ ಕರಡಕಲ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಶಶಿಧರ ಸಕ್ರಿ ಮಾತನಾಡಿ, ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ವಸತಿ ನಿಲಯ ಮಂಜೂರು ಮಾಡಿಸಿರುವುದು ಶ್ಲಾಘನೀಯ ಕಾರ್ಯ ಎಂದರು.

ಈ ಸಂದರ್ಭದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತದ ಬಳಿ ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ವಿಜಯೋತ್ಸವ ಆಚರಿಸಿ, ಪಟಾಕಿ ಸಿಡಿಸಿ, ಸಿಹಿ ವಿತರಿಸಿದರು.

ಕಾರ್ಯಕ್ರಮದಲ್ಲಿ ಕುಕನೂರು ತಹಶೀಲ್ದಾರ ಬಸವರಾಜ ಬೆಣ್ಣೆಶಿರೂರು, ತಾಪಂ ಇಓ ಸಂತೋಷ ಪಾಟೀಲ್, ಸಹಾಯಕ ನಿರ್ದೇಶಕ ಹನಮಂತಗೌಡ ಪಾಟೀಲ್, ಎಂಜಿನಿಯ-ರಿಂಗ್ ಕಾಲೇಜು ಪ್ರಾಚಾರ್ಯ ವೀರುಪಾಕ್ಷಪ್ಪ ಬಾಗೇವಾಡಿ, ಸರ್ಕಾರಿ ಬಿಎಸ್ಸಿ ನರ್ಸಿಂಗ್ ಕಾಲೇಜು ಪ್ರಾಚಾರ್ಯ ಡಾ. ರಾಮದುರ್ಗ, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಶೇಖರಗೌಡ ಉಳ್ಳಾಗಡ್ಡಿ ಸೇ-

## ಸಾಹಿತ್ಯ ಸಿಂಚನ

ಶಿವರಾತ್ರಿ

ಭವದೊಳಿರುವ ಭಕ್ತರೆಲ್ಲ ಶಿವ ನಾಮ ಸ್ಮರಿಸುವಂತ ದೇವ
ರುದ್ರನ ಮಹಿಮೆ ಭಾವದಲ್ಲಿ ಮೆರೆವ ದಿನವು

ಮಾಘ ಮಾಸ ಕೃಷ್ಣಪಕ್ಷ ಚತುರ್ದಶಿ ಶುಭ ದಿನವು ಬ್ರಹ್ಮ
ವಿಷ್ಣು ಗರ್ವವಳಿಸಿ ಶಿವ ಲಿಂಗವಾದ ದಿನವು

ಗಿರಿಜೆಯನ್ನು ವರಿಸಿದ ದಿನವು ತಾಂಡವವಾಡಿದ ದಿನವು
ನೀಲಕಂಠನೆನೆಸಿ ಶಿವನು ವಿಷವನ್ನು ಕುಡಿದ ದಿನವು

ಹರನ ಗಂಟಲಿಂದ ಕೆಳಗೆ ವಿಷ ಇಳಿಯ ಬಾರದೆಂದು
ರಾತ್ರಿಯಿಡೀ ಗಿರಿಜೆಯು ನಡೆದಂತ ವ್ರತದ ದಿನವು

ಭಗೀರಥನ ಕೋರಿಕೆಯಂತೆ ಸರ್ವೇಶ ಮಹಾದೇವ
ಗಂಗೆಯನ್ನು ಭೂಮಿಗೆ ಹರಿಯ ಬಿಟ್ಟ ಹರನ ದಿನವು

ಪಶುಪತಿ ಪರಮೇಶ ಶಂಭೋ ನೀಲಕಂಠ ರುದ್ರ ಶಿವೆಯ
ಒಡಗೂಡಿ ಇಳೆಗೆ ಬರುವಂತ ದಿನವು

ಬಿಲ್ವಪತ್ರೆ ತೆಲಗಿ ಹೂವು ತುಳಸಿ ಪ್ರಿಯ ಓಂಕಾರ
ಭಕ್ತಿಯಿಂದ ಪೂಜಿಸವವರ ಪಾಪ ನಾಶದ ದಿನವು
ರಾತ್ರಿಯಿಡೀ ಗಂಗಾಧರನ ಧ್ಯಾನಿಸೊ ಪುಣ್ಯ ದಿನವು
ಉಪವಾಸವಿದ್ದು ಶಿವನ ಪೂಜಿಸೊ ದಿವ್ಯ ದಿನವು

ಧ್ಯಾನ ಪ್ರಿಯ ಭೈರವನು ಪ್ರಸನ್ನನಾಗುವ ದಿನವು ಭಕ್ತಗೆ
ಒಲಿದು ದೇವ ಕರುಣೆ ತೋರಿ ನಲಿವ ದಿನವು

ತುಳಸಿದಾಸ ಬಿ ಎಸ್

# "ನಿಡಶೇಸಿ ಗ್ರಾಮದಲ್ಲಿ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ"

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಕುಷ್ಟಗಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ದೋಟಿಹಾಳ ಇವರ ಸಂಯುಕ್ತಾಶ್ರಯದಲ್ಲಿ ನಿಡಶೇಸಿ ಗ್ರಾಮದ ಸಮುದಾಯ ಭವನದಲ್ಲಿ ಸೋಮವಾರ "ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ" ಕಾರ್ಯಕ್ರಮ ನಡೆಯಿತು.**

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಮಾತನಾಡಿ, ಹಾವು ಕಡಿತದಿಂದ ಉಂಟಾಗುವ ಮರಣಗಳನ್ನು ಕಡಿಮೆಗೊಳಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಭಾರತದಲ್ಲಿ ಪ್ರಮುಖ ನಾಲ್ಕು ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕುಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತಗಳಿಂದ ಹೆಚ್ಚಿನ ಸಾವುಗಳು ಸಂಭವಿಸುತ್ತವೆ. ನಾಗರಹಾವು ಹೊರತುಪಡಿಸಿ ಉಳಿದ ಹಾವುಗಳು ರಾತ್ರಿ ವೇಳೆ



ಹೆಚ್ಚು ಚಟುವಟಿಕೆಯಿಂದಿರುತ್ತವೆ. ಆದ್ದರಿಂದ ರಾತ್ರಿ ಹೊರಗೆ ತೆರಳುವಾಗ ಟಾರ್ಚ್ ಬಳಸುವುದು, ಮನೆ ಅಂಗಳವನ್ನು ಸ್ವಚ್ಛವಾಗಿಡುವುದು, ಗಿಡಗಂಟಿಗಳನ್ನು ಕಡಿದು ನಿರ್ವಹಿಸುವುದು ಅಗತ್ಯ ಎಂದು ತಿಳಿಸಿದರು.

ಹಾವುಗಳಿರುವ ಸಾಧ್ಯತೆ ಇರುವ ಪ್ರದೇಶಗಳಲ್ಲಿ ಕೆಲಸ ಮಾಡುವಾಗ ಶೂ ಧರಿಸಬೇಕು. ಹೊರಗೆ ಅಥವಾ ಹೊಲಗದ್ದೆಗಳಲ್ಲಿ ಮಲಗುವಾಗ ನೆಲದ ಬದಲು ಎತ್ತರದ ಮಂಚ ಬಳಸಬೇಕು. ಅನಿವಾರ್ಯವಾಗಿ ನೆಲದಲ್ಲಿ ಮಲಗಬೇಕಾದರೆ ಸೊಳ್ಳೆಪರದೆ ಬಳಕೆ ಮಾಡಬೇಕು. ಹೊಲದಲ್ಲಿ ಮೇವು ಅಥವಾ ಹಸಿಹುಲ್ಲು ಕೀಳುವಾಗ ಕುಡುಗೋಲು ಬಳಸಬೇಕು ಎಂದರು.

ಹಾವು ಕಚ್ಚಿದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು. ರಕ್ತಬಂಧಕಪಟ್ಟಿ ಕಟ್ಟಬಾರದು, ಗಾಯವನ್ನು ಕತ್ತರಿಸಬಾರದು ಅಥವಾ ಏನನ್ನೂ ಹಚ್ಚಬಾರದು. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ವಿಧಾನಗಳನ್ನು ಅವಲಂಬಿಸಬಾರದು. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಸಮಾಧಾನಪಡಿಸಿ, ಕಚ್ಚಿದ ಭಾಗ ಅಲುಗಾಡದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕುಷ್ಟಗಿಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಶೇಖರ ಮೇಟಿ ಬಾಲ್ಯವಿವಾಹ ನಿಷೇಧ, ಆರ್‌ಸಿಎಚ್ ಹಾಗೂ ಕುಟುಂಬ ಕಲ್ಯಾಣ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಸಾಂಕ್ರಾಮಿಕ ರೋಗಗಳ ತಜ್ಞ ಡಾ. ಪ್ರಶಾಂತ ರಾಷ್ಟ್ರೀಯ ರೇಬಿಸ್ ನಿಯಂತ್ರಣದ ಬಗ್ಗೆ ಮಾತನಾಡಿದರು.

ಸಿ.ಎಚ್.ಒ ಪೂರ್ಣಿಮಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ವಿವರಿಸಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶಾಕೀರ್‌ಬಾನು, ಆಶಾ ಕಾರ್ಯಕರ್ತೆಯರಾದ ಶಾಮಲಾಬಾಯಿ, ಅಂಗನವಾಡಿ ಕಾರ್ಯಕರ್ತೆಯರಾದ ಚೈತ್ರಾ, ದೇವಮ್ಮ, ಮಲ್ಲಿಕಾ ಸೇರಿದಂತೆ ಗ್ರಾಮದ ನಾಗರಿಕರು, ಗರ್ಭಿಣಿಯರು ಮತ್ತು ಬಾಣಂತಿಯರು ಭಾಗವಹಿಸಿದರು.

# "ಲಕ್‌ಪತಿ ದೀದಿ ತರಬೇತಿ ಕಾರ್ಯಾಗಾರಕ್ಕೆ ಚಾಲನೆ"

ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಸಂಜೀವಿನಿ ಯೋಜನೆಯಡಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ ಒಂದು ದಿನದ ಲಕ್‌ಪತಿ ದೀದಿ ತರಬೇತಿ ಕಾರ್ಯಾಗಾರ ಗುರುವಾರ ನಡೆಯಿತು.**

ನರೇಗಾ ಯೋಜನೆಯ ಸಹಾಯಕ ನಿರ್ದೇಶಕಿ ಸೌಮ್ಯ ಕೆ. ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಗ್ರಾಮೀಣ ಭಾಗದ ಸ್ವಸಹಾಯ ಗುಂಪುಗಳ ಮಹಿಳೆಯರಿಗೆ ಲಕ್‌ಪತಿ ದೀದಿ ಯೋಜನೆಯ ಗುರಿ, ಉದ್ದೇಶ ಹಾಗೂ ವಿವಿಧ ಜೀವನೋಪಾಯ ಚಟುವಟಿಕೆಗಳ ಕುರಿತು ಅರಿವು ಮೂಡಿಸುವಲ್ಲಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳ ಪಾತ್ರ ಮಹತ್ವದ್ದು. ಈ ತರಬೇತಿ ಮಹಿಳೆಯರ ಆರ್ಥಿಕ



ಸಬಲೀಕರಣಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ತರಬೇತಿದಾರ ಸಾಬಣ್ಣ ಹಾಗೂ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರು ಪ್ರಸ್ತಾವಿಕವಾಗಿ ಮಾತನಾಡಿ, 2025?26ನೇ ಸಾಲಿನ ಕ್ರಿಯಾ ಯೋಜನೆಯನ್ವಯ ರಾಜ್ಯದಲ್ಲಿ ಇದುವರೆಗೆ 12,75,138 ಸ್ವಸಹಾಯ ಗುಂಪುಗಳ ಸದಸ್ಯರನ್ನು ಲಕ್‌ಪತಿ ದೀದಿಗಳಾಗಿ ಗುರುತಿಸಲಾಗಿದೆ. ಇವರಲ್ಲಿ 5,37,469 ಮಂದಿ ವಿವಿಧ ಜೀವನೋಪಾಯ ಚಟುವಟಿಕೆಗಳ ಮೂಲಕ ಲಕ್‌ಪತಿ ಸ್ಥಾನ ಪಡೆದಿದ್ದಾರೆ ಎಂದು ಮಾಹಿತಿ ನೀಡಿದರು.

ಉಳಿದ ಸದಸ್ಯರಿಗೆ ಯೋಜನೆಯ ಅರಿವು ಮೂಡಿಸುವುದರೊಂದಿಗೆ ಸ್ಥಳೀಯ ಅವಕಾಶಗಳಿಗೆ ಅನುಗುಣವಾಗಿ ಇತರೆ ಇಲಾಖೆಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಬ್ಯಾಂಕರೊಂದಿಗೆ ಒಗ್ಗೂಡಿಸುವ ಉದ್ದೇಶದಿಂದ ವಿಶೇಷ ತರಬೇತಿಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಜೀವಿನಿ ಯೋಜನೆಯ ತಾಲೂಕು ಅಭಿಯಾನ ನಿರ್ವಹಣಾ ಘಟಕದ ವೆಂಕಟೇಶ, ವಿದ್ಯಾಲಕ್ಷ್ಮೀ, ವೀರೇಶ, ಕೃಷಿ ಯುವ ವೃತ್ತಿಪರ ಮಂಜುನಾಥ, ತಾಲೂಕು ವ್ಯವಸ್ಥಾಪಕ ಕೊಟ್ರೇಶ್, ಬಿಆರ್‌ಪಿ?ಇಪಿ ಸಿದ್ಧಮ್ಮ, ಗಣಕಯಂತ್ರ ನಿರ್ವಹಕ ನವೀನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮನೆ ಮುಂದೆ ಕೆಮಿದ್ದಕ್ಕೆ ಹಲ್ಲೆ, ರಾಜಸ್ಥಾನದ ವ್ಯಕ್ತಿ ಸಾವು

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮನೆ ಮುಂದೆ ಕೆಮಿದ್ದಕ್ಕೆ ಗಲಾಟೆಯಾಗಿ ಹಲ್ಲೆ ನಡೆಸಿದ್ದರಿಂದ ರಾಜಸ್ಥಾನದ ವ್ಯಕ್ತಿ ಮೃತಪಟ್ಟಿರುವ ಘಟನೆ ಬಿಡದಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ರಾಜಸ್ಥಾನ ಮೂಲದ ವಿನೋದ್‌ಕುಮಾರ್ ಶೈನಿ (34) ಮೃತಪಟ್ಟವರು. ಇವರು ಕೇತಗಾನ ಹಳ್ಳಿಯಲ್ಲಿ ವಾಸವಾಗಿದ್ದರು.**




ಟ್ರಾನ್ಸ್ ಪೋರ್ಟ್ ಕಂಪನಿಯ ಉದ್ಯೋಗಿಯಾಗಿರುವ ವಿನೋದ್ ಕುಮಾರ್ ಅವರು ಅಸ್ತಮಾದಿಂದ ಬಳಲುತ್ತಿದ್ದರು.ಫೆ.7 ರಂದು ಸಂಜೆ ವಿನೋದ್ ಕುಮಾರ್ ಜೋರಾಗಿ ಕೆಮುತ್ತಿದ್ದಾಗ ಅಕ್ಕಪಕ್ಕದವರು ಗಲಾಟೆ ಮಾಡಿದ್ದಾರೆ. ಇದೇ ವಿಚಾರಕ್ಕೆ ಜಗಳ ವಿಕೋಪಕ್ಕೆ ತಿರುಗಿ ಅವರನ್ನು ತಲ್ಲಾಡಿ ನೂಕಾಡಿ ಹಲ್ಲೆ ನಡೆಸಿದ್ದಾರೆ. ಆ ಸಂದರ್ಭದಲ್ಲಿ ಗಲ್ಲಕ್ಕೆ ಬಲವಾದ ಪೆಟ್ಟು ಬಿದ್ದಿದೆ. ತಕ್ಷಣ ಅವರನ್ನು ಬಿಡದಿಯ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಿ ಶಸ್ತ್ರಚಿಕಿತ್ಸೆಗೆ ಒಳಪಡಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ನಿನ್ನೆ ರಾತ್ರಿ ಮೃತಪಟ್ಟಿದ್ದಾರೆ. ಈ ಬಗ್ಗೆ ಬಿಡದಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೃತರ ಮರಣೋತ್ತರ ಪರೀಕ್ಷೆ ವರದಿ ಬಂದ ನಂತರವಷ್ಟೇ ಸಾವು ಹೇಗಾಗಿದೆ ಎಂಬುವುದು ಗೊತ್ತಾಗಲಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# "ಬಾಲ್ಯ ವಿವಾಹ ತಡೆಗೆ ಇಲಾಖೆಗಳ ಕೈಜೋಡಣೆ ಅಗತ್ಯ:ಮಹಾಂತಗೌಡಪಾಟೀಲ್"



ನೈಜ್ಯ ದೆಸೆ ನ್ಯೂಸ್

**ಗಂಗಾವತಿ: ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಮಹಾಂತಗೌಡ ಪಾಟೀಲ್ ಹೇಳಿದರು.**

ತಾಲೂಕಿನ ವಡ್ಡರಹಟ್ಟಿ ಗ್ರಾಮ ಪಂಚಾಯತ್‌ನಲ್ಲಿ ನಡೆದ ಬಾಲ್ಯ ವಿವಾಹ ತಡೆ ಜಾಗೃತಿ ತರಬೇತಿ ಹಾಗೂ ಘನ ತ್ಯಾಜ್ಯ ನಿರ್ವಹಣೆ ಕಾರ್ಯಾಗಾರದಲ್ಲಿ ಗುರುವಾರ ಮಾತನಾಡಿದ ಅವರು, ಮಕ್ಕಳ ರಕ್ಷಣೆ ಎಲ್ಲರ ಹೊಣೆಗಾರಿಕೆ. ಗ್ರಾಮ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಸೇರಿದಂತೆ ಸಂಬಂಧಿತ ಇಲಾಖೆಗಳು ಕೈಜೋಡಿಸಿದಾಗ ಮಾತ್ರ ಬಾಲ್ಯ ವಿವಾಹ ನಿರ್ಮೂಲನೆ ಸಾಧ್ಯ ಎಂದು ಹೇಳಿದರು. 18 ವರ್ಷದೊಳಗಿನ ಹೆಣ್ಣುಮಕ್ಕಳ ವಿವಾಹಕ್ಕೆ ಕಾನೂನುಬದ್ಧ ಶಿಕ್ಷೆಗಳಿವೆ. ಬಾಲ್ಯ ವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಸಮಾಜದಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ಪ್ರೌಢಶಾಲಾ ಹಂತದಲ್ಲಿಯೇ ಮಕ್ಕಳಿಗೆ ಜಾಗೃತಿ ನೀಡುವುದು ಅಗತ್ಯ ಎಂದರು.

ಘನ ತ್ಯಾಜ್ಯ ನಿರ್ವಹಣೆ ಕುರಿತು ಮಾತನಾಡಿದ ಅವರು, ಕಸ ಸುಡುವುದರಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಂಗಡಿಸಿ ಗ್ರಾಮ ಪಂಚಾಯತ್ ಸ್ವಚ್ಛ ವಾಹಿನಿಗೆ ನೀಡಬೇಕು ಎಂದು ತಿಳಿಸಿದರು.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುರೇಶ ಛಲವಾದಿ ಕಾರ್ಯಕ್ರಮದಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಬಳಿಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ನಡೆಯಿತು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಶನಿವಾರದಂದು ನಗರದ ಹಿಲ್ ಗಾರ್ಡನ್ ನಲ್ಲಿ 22ನೇ ಸತೀಶ ಶುಗರ್ಸ ಅವಾರ್ಡ್ಸ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಗೋಕಾಕ: ವಿದ್ಯಾರ್ಥಿಗಳಲ್ಲಿಯ ಕ್ರೀಡಾ ಆಸಕ್ತಿ ಮತ್ತು ಅವರ ಬೇಡಿಕೆಯನ್ನು ಗಮನಿಸಿ ಪ್ರಸ್ತುತ ವರ್ಷದಿಂದ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಒಲಂಪಿಕ್ ಮಾದರಿಯಲ್ಲಿ ಸತೀಶ ಶುಗರ್ಸ ಅವಾರ್ಡ್ಸ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗುವುದು ಎಂದು ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ರಾಹುಲ್ ಜಾರಕಿಹೊಳಿ ಅವರು ಘೋಷಣೆ ಮಾಡಿದರು.**

ಶನಿವಾರದಂದು ನಗರದ ಹಿಲ್ ಗಾರ್ಡನ್ ನಲ್ಲಿ 22ನೇ ಸತೀಶ ಶುಗರ್ಸ ಅವಾರ್ಡ್ಸ ಕಾರ್ಯಕ್ರಮದ ಬಹುಮಾನ ವಿಜೇತರಾದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಔಣತಕೂಟ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗೋಕಾಕ, ಯಮಕನಮರಡಿ ಹಾಗೂ ಚಿಕ್ಕೋಡಿಯಲ್ಲಿ ನಡೆಯುವ ಸತೀಶ ಪ್ರತಿಭಾ



ಪುರಸ್ಕಾರ ಮತ್ತು ಸತೀಶ ಶುಗರ್ಸ ಅವಾರ್ಡ್ಸ ಕಾರ್ಯಕ್ರಮದ ಆಯ್ಕೆ ಪ್ರಕ್ರಿಯೆಯಲ್ಲಿ ಸುಮಾರು 12 ಸಾವಿರ ಸ್ಪರ್ಧೆಗಳುಗಳು ಭಾಗವಹಿಸುತ್ತಿದ್ದಾರೆ, ಅದರಲ್ಲಿ ಅಂತಿಮ ಹಂತದ ಸ್ಪರ್ಧೆಯಲ್ಲಿ 3 ಸಾವಿರ ವಿದ್ಯಾರ್ಥಿಗಳು ಭಾಗವಹಿಸಿ ಲಕ್ಷಾಂತರ ಮೊತ್ತದ ಬಹುಮಾನ ಗೆಲ್ಲುತಾ ಬಂದಿದ್ದಾರೆ.

ಸತೀಶ ಶುಗರ್ಸ ಅವಾರ್ಡ್ಸ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೋಳುವ ಮುಖೇನ ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಗೋಕಾಕ ಹಾಗೂ ಬೆಳಗಾವಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸುತ್ತಿದ್ದಾರೆ. ವಿದ್ಯಾರ್ಥಿಗಳಲ್ಲಿಯ ಆಸಕ್ತಿ ಗಮನಿಸಿ ಪ್ರಸ್ತುತ ವರ್ಷದಿಂದ ಸತೀಶ ಶುಗರ್ಸ ಅವಾರ್ಡ್ಸ ಮತ್ತು ಸತೀಶ ಪ್ರತಿಭಾ ಪುರಸ್ಕಾರದ ಬಹುಮಾನದ ಮೊತ್ತವನ್ನು ಹೆಚ್ಚಿಸಲು ನಿರ್ಧರಿಸಿದ್ದೇವೆ.

ಅಂತಿಮ ಹಂತದಲ್ಲಿ ಸಮಾಧಾನಕರ ಬಹುಮಾನ ಪಡೆದುಕೊಂಡವರು ಸಹ ವಿಜೇತ ವಿದ್ಯಾರ್ಥಿಗಳ ಸರಿಸಮಾನವಾಗಿ ಸ್ಪರ್ಧೆ ನೀಡುತ್ತಿರುವುದನ್ನು ಗಮನಿಸಿ ಪ್ರಸ್ತುತ ವರ್ಷದಿಂದಲೇ ಸಮಾಧಾನಕರ ಬಹುಮಾನದ ಮೊತ್ತವನ್ನು ಸಹ ನಾವು ಹೆಚ್ಚಿಸಲು ತಿರ್ಮಾನಿಸಲಾಗಿದ್ದು ಜಿಲ್ಲೆಯ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಮತ್ತು ಈಗಿನಿಂದಲೇ ಇದರ ತಯಾರಿ ನಡೆಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಅಂತಿಮ ಹಂತದ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ


# ಸರ್ಕಾರಿ ಶಾಲಾ ಮಕ್ಕಳನ್ನ ಹೆಲಿಕಾಪ್ಟರ್‌ನಲ್ಲಿ ಸುತ್ತಾಡಿಸಿದ ಸಚಿವಜಮೀರ್‌ಅಹ್ಮದ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಾಯಕತ್ವದ ಬದಲಾವಣೆಯ ಬಗ್ಗೆ ಹೈಕಮಾಂಡ್ ಈವರೆಗೂ ಯಾವುದೇ ಹೇಳಿಕೆ ನೀಡಿಲ್ಲ ಎಂದ ಮೇಲೆ ಅದರ ಬಗ್ಗೆ ಚರ್ಚೆ ಮಾಡುವ ಅಗತ್ಯವೇ ಇಲ್ಲ. ರಾಜ್ಯದ ನಾಯಕರು ನೀಡುವ ಹೇಳಿಕೆಗಳಿಗೆಲ್ಲಾ ಉತ್ತರ ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವದ್ಧಂತಿಗಳನ್ನು ತಳ್ಳಿ ಹಾಕಿದ್ದಾರೆ.**

ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ನಾಯಕತ್ವ ವಿಚಾರಕ್ಕೆ ಸಂಬಂಧಪಟ್ಟಂತೆ ಪದೇ ಪದೇ ಪ್ರಶ್ನೆ ಕೇಳಬೇಡಿ. ಅದಕ್ಕೆ ನಾನು ಉತ್ತರ ನೀಡುವುದಿಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶ್ರಮಕ್ಕೆ ತಕ್ಕ ಫಲ ಸಿಗುತದೆ ಎಂದು ಹೇಳಿರುವುದಕ್ಕೆ ಹಾಗೂ ಐದು ವರ್ಷ ಕಾಲ ತಮ್ಮ ತಂದೆಯವರೆ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ಡಾ.ಯತೀಂದ್ರ ಸಿದ್ದರಾಮಯ್ಯ ಪುನರುಚ್ಚರಿಸಿರುವುದಕ್ಕೆ ಸಂಬಂಧಪಟ್ಟಂತೆ ಪದೇ ಪದೇ ಪ್ರಶ್ನೆಗಳು





ಎದುರಾದಾಗ ಸಿದ್ದರಾಮಯ್ಯ ಸಿಡಿಮಿಡಿಯಾದರು.

ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುತ್ತೇನೆ ಎಂದು ನಾನು ಈಗಾಗಲೇ ಹೇಳಿದ್ದೇನೆ. ರಾಜ್ಯದ ಎಲ್ಲಾ ನಾಯಕರು ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳಬೇಕು ಎಂದರು. ಅಧಿಕಾರ ಹಂಚಿಕೆಗೆ ಸಂಬಂಧಪಟ್ಟಂತೆ ಯಾರು ಏನು ಹೇಳಿದ್ದಾರೆ ಎಂಬುದು ಮುಖ್ಯ ಅಲ್ಲ. ಹೈಕಮಾಂಡ್ ನಾಯಕರು ಏನಾದರೂ ಹೇಳಿದ್ದಾರೆಯೇ ? ಹೇಳಿಲ್ಲ ಎಂದಾದ ಮೇಲೆ ಅದನ್ನು ಬಿಟ್ಟು ಬಿಡಿ. ಸ್ಥಳೀಯ ನಾಯಕರು ನೀಡಿರುವ ಹೇಳಿಕೆಗಳಿಗೆಲ್ಲಾ ನಾನು ಉತ್ತರ ಕೊಡುವುದಿಲ್ಲ ಎಂದರು. ಅಧಿಕಾರ ಹಂಚಿಕೆ ಸಂಬಂಧಪಟ್ಟಂತೆ ಮಾತುಕತೆಗಾಗಿ ಹೈಕಮಾಂಡ್ ತಮಗೆ ಆಹ್ವಾನ ನೀಡಿದರೆ, ನಾನು ದೆಹಲಿಗೆ ಹೋಗುತ್ತೇನೆ. ಆದರೆ ಯಾವ ದಿನದಂದು ಕರೆಯುತ್ತಾರೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ ಎಂದರು.

ರಾಜ್ಯ ಸರ್ಕಾರಕ್ಕೆ ನೂರು ದಿನ ತುಂಬಿರುವುದಕ್ಕೆ ಹಾವೇರಿಯಲ್ಲಿಂದು ಬೃಹತ್ ಸಮಾವೇಶ ನಡೆಸಲಾಗುತ್ತಿದೆ. ಇದನ್ನು ಬಿಜೆಪಿಯವರು ಟೀಕಿಸುವುದು ಅರ್ಥಹೀನ. ನಾಲ್ಕು ವರ್ಷ ಅವರು ಅಧಿಕಾರ ನಡೆಸಿದ್ದರು. ಆಗ ಏನನ್ನು ಸಾಧನೆ ಮಾಡಲಿಲ್ಲ ಎಂದು ತಿರುಗೇಟು ನೀಡಿದರು.

ನಮ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ. ನಮ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಂಡಿದೆ. ಮುಂದಿನ ದಿನಗಳಲ್ಲೂ ಯೋಜನೆಗಳು ಮುಂದುವರಿಯಲಿವೆ. ಈ ಹಿಂದೆ ತಾವು ಮುಖ್ಯಮಂತ್ರಿ ಆಗಿದ್ದಾಗ ನೀಡಿದ್ದ ಬಹುತೇಕ ಭರವಸೆಗಳನ್ನು ಈಡೇರಿಸಿದ್ದೇವೆ. ಅನಂತರ ಅಧಿಕಾರಕ್ಕೆ ಬಂದ ಬಿಜೆಪಿಯವರು ತಮ ಪ್ರಣಾಳಿಕೆಯಲ್ಲಿ 600 ಭರವಸೆಗಳನ್ನು ನೀಡಿ, ಅದರಲ್ಲಿ ಶೇ.10ರಷ್ಟನ್ನು ಈಡೇರಿಸಲಿಲ್ಲ. ಪ್ರಸಕ್ತ ಎರಡುವರೆ ವರ್ಷದಲ್ಲಿ 592 ಭರವಸೆಗಳ ಪೈಕಿ 292ಕ್ಕೂ ಹೆಚ್ಚು ಭರವಸೆಗಳನ್ನು ಈಡೇರಿಸಿದ್ದೇವೆ. ಬಿಜೆಪಿಯವರು ಹೊಟ್ಟೆ ಕಿಚ್ಚಿನಿಂದ ಭ್ರಷ್ಟಾಚಾರ ಸೇರಿದಂತೆ ಹಲವಾರು ವಿಚಾರಗಳಲ್ಲಿ ತಮ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದರು.

ಮತ್ತೆ ಮುನ್ನೆಲೆಗೆ ಬಂದ ಜಾತಿಗಣತಿ ವರದಿ: ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ವರದಿಯನ್ನು ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷರು ಮೂರು ನಾಲ್ಕು ತಿಂಗಳ ಒಳಗಾಗಿ ಸಲ್ಲಿಸಲಿದ್ದಾರೆ. ಆನಂತರ ಸರ್ಕಾರ ಅದರ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದರು.

ವರದಾ-ಬೆಡ್ತಿ ನದಿಗಳ ಜೋಡಣೆ ಸಂಬಂಧ ಪಟ್ಟಂತೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಈಗಾಗಲೇ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿದೆ. ಯೋಜನೆ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಕೇಂದ್ರ ಸರ್ಕಾರ ನಿರ್ಧಾರ ತೆಗೆದುಕೊಳ್ಳಬೇಕು. ಆದರೆ ಅವರು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬ ವಿಶ್ವಾಸ ಕಡಿಮೆ ಇದೆ ಎಂದರು

## ನೇಮಕಾತಿ ಪ್ರಕಟಣೆ

HESCOM ನೇಮಕಾತಿ 2026: 388 ಟ್ರೈನಿ (ಐಟಿಐ ಎಲೆಕ್ಟ್ರಿಷಿಯನ್) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್ ಫೆಬ್ರವರಿ 2026 ರ ಹೆಸ್ಕಾಂ ಅಧಿಕೃತ ಅಧಿಸೂಚನೆಯ ಮೂಲಕ ಟ್ರೈನಿ (ಐಟಿಐ ಎಲೆಕ್ಟ್ರಿಷಿಯನ್) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಹುಬ್ಬಳ್ಳಿ–ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು: 02–03–2026 ಮತ್ತು 09–ಮಾರ್ಚ್–2026 ರಂದು ಅಥ–ವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: hescom.karnataka.gov.in ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 09–03–2026

## ಧಾರ್ಮಿಕ ಮೌಲ್ಯ ಪಾಲನೆಯಿಂದ ಶಾಂತಿ: ಕೊಡೆಕಲ್ ಶ್ರೀ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮಹಾತ್ಮರ, ಸಂತ ಶರಣ–ರ ಬದುಕಿನ ಆದರ್ಶಗಳನ್ನು ಅಳವಡಿಸಿಕೊಂಡು ಧಾರ್ಮಿಕ ಮೌಲ್ಯಗಳ ಪರಿಪಾಲನೆಯನ್ನು ಮಾಡಿದರೆ ಜೀವನದಲ್ಲಿ ಸುಖ ಶಾಂತಿ ಹಾಗೂ ನೆಮ್ಮದಿ ಪ್ರಾಪ್ತಿಯಾಗುತ್ತದೆ ಎಂದು ಕೊಡೆಕಲ್ ದುರದುಂಡೇಶ್ವರ ಮಠದ ಪೂಜ್ಯ ಶ್ರೀ ಶಿವಕುಮಾರ ಸ್ವಾಮೀಜಿ ಹೇಳಿದರು.**

ತಾಲೂಕಿನ ನಾವದಗಿ ಗ್ರಾಮದ ಪರ್ವತೇಶ್ವರ ಬ್ರಹನ್ಮಠದ ಪೂಜ್ಯಷ.ಬ್ರ. ಶ್ರೀ ರಾಜ ಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡ ಗುಡ್ಡಾಪುರದ ಶ್ರೀ ದಾನಮ್ಮ ದೇವಿ ತೊಟ್ಟಿಲೋತ್ಸವ ಸಮಾರಂಭದ ಸಾನಿಧ್ಯ ವಹಿಸಿ ಶುಕ್ರವಾರ ಸಂಜೆ ಆಶೀರ್ವಚನ ನೀಡಿದರು.




ಬದುಕು ಎಷ್ಟು ಶ್ರೀಮಂತವಾಗಿದೆ ಅನ್ನುವುದಕ್ಕಿಂತ ಎಷ್ಟು ನೆಮ್ಮದಿಯಿಂದ ಕೂಡಿದೆ ಎಂಬುದು ಮುಖ್ಯ. ಸದಾ ಅನ್ಯರ ಕುರಿತು ಚಿಂತಿಸದೆ ನಮ್ಮ ಕುರಿತು ಚಿಂತಿಸುವ ಅಗತ್ಯವಿದೆ, ಆಧ್ಯಾತ್ಮಿಕ ಬದುಕಿನೊಂದಿಗೆ ಸತ್ಯ, ಧರ್ಮದ ಮಾರ್ಗದಲ್ಲಿ ನಡೆದರೆ ಸುಖ ಶಾಂತಿ ದೊರಕುತ್ತದೆ.

ಪೂಜ್ಯ ರಾಜೇಂದ್ರ ಒಡೆಯರ್ ಶಿವಾಚಾರ್ಯರು ಈ ಭಾಗದ ಭಕ್ತರನ್ನು ಸಂಸ್ಕರಿಸಲು ಹಗಲಿರಳು ಶ್ರಮಿಸುತ್ತಿದ್ದಾರೆ ಅವರ ಧರ್ಮ ಜಾಗೃತಿಯ ಕಾರ್ಯ ಎಲ್ಲ–ರಿಗೂ ಅನುಕರಣೀಯವಾಗಿದೆ. ಅವರ ಗುರು ಪಟ್ಟಾಧಿಕಾರದ ಐತಿಹಾಸಿಕ ಕಾರ್ಯಕ್ರಮವನ್ನು ಮಾಡಿ ಇಡೀ ನಾಡಿಗೇ ಒಳ್ಳೆಯ ಸಂದೇಶವನ್ನು ಕೊಟ್ಟಿದ್ದೀರಿ ಮುಂದೆಯೂ ಅವರು ಮಾಡುವ ಎಲ್ಲ ಧರ್ಮ ಕಾರ್ಯಗಳಲ್ಲಿ ನಿಮ್ಮೆಲ್ಲರ ಸಹಕಾರ ಅವರೊಂದಿಗಿರಲಿ ಎಂದರು. ಪೂಜ್ಯ ಷ.ಬ್ರ.ಶ್ರೀ ರಾಜ ಗುರು ರಾಜೇಂದ್ರ ಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಚಬನೂರಿನ ರಾಮಲಿಂಗಯ್ಯ ಶ್ರೀಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಸಿಂಧನೂರಿನ ಡಾ.ಗುರುಮೂರ್ತಯ್ಯ ಹಿರೇಮಠ,ಸಾಹಿತಿ ಬಸವರಾಜ ಗೊರಜಿ, ಪುರಾಣಿಕ ರಾಚಯ್ಯ ಹಿರೇಮಠ,ಸಂಗೀತಗಾರ ಸೋಮಯ್ಯ ಸ್ವಾಮಿ,ತಬಲವಾದಕ ಮಹಾಂತೇಶ ಬಿರಾದಾರ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

## ಪರಮೇಶ್ವರ ರಾಜ್ಯದ ಮುಂದಿನ ನಾಯಕ :ಸಿಎಂ ಆಪ್ತ ಹಿಟ್ನಾಳ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಮುಂದೆ ನಾಡಿನ ಮುಖಂಡರಾಗಲಿರುವ ನಾಯಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಶಾಸಕರೊಬ್ಬರು ಸಂಬೋಧಿಸುವ ಮೂಲಕ ಪ್ರಸಕ್ತ ರಾಜಕೀಯ ಬೆಳವಣಿಗೆಯಲ್ಲಿ ಕುತೂಹಲ ಕೆರಳಿಸಿದ್ದಾರೆ. ಅದರಲ್ಲೂ ಸರ್ಕಾರಿ ಸಮಾವೇಶದ ವೇದಿಕೆಯಲ್ಲೇ ಈ ರೀತಿ ಹೇಳಿಕೆ ನೀಡಿರುವುದು ನಾನಾರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಪ್ರಸ್ತುತ ರಾಜಕೀಯ ಬೆಳವಣಿಗೆಗಳಲ್ಲಿ ಪ್ರತಿಯೊಂದು ಮಾತುಗಳು ಬೇರೆ ಬೇರೆ ರೀತಿಯ ಅರ್ಥ–ಅನರ್ಥಗಳಿಗೆ ಕಾರಣವಾಗುತ್ತಿವೆ.**



ಜನಪ್ರತಿನಿಧಿಗಳಾಗಿರುವವರು ಅಳೆದು ತೂಗಿ ಮಾತನಾಡಬೇಕಿದೆ. ಅದರಲ್ಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಣದಲ್ಲಿ ಗುರುತಿಸಿಕೊಂಡಿರುವ ಶಾಸಕರು, ಸಚಿವರು ಮತ್ತು ಪ್ರಭಾವಿ ನಾಯಕರ ಮಾತುಗಳು ವ್ಯಾಪಕ ಪರಿಣಾಮ ಬೀರುತ್ತವೆ. ರಾಜ್ಯ ಸರ್ಕಾರಕ್ಕೆ ಸಾವಿರ ದಿನಗಳು ತುಂಬಿದ ಸಂದರ್ಭದಲ್ಲಿ ಹಾವೇರಿಯಲ್ಲಿ ಇಂದು ರಾಜ್ಯ ಸರ್ಕಾರದ ವತಿಯಿಂದ ಭೂ ಸಮರ್ಪಣಾ ಗ್ಯಾರಂಟಿ ಸಮಾವೇಶ ಹಾಗೂ ಜನಸೇವೆಯಲ್ಲಿ ಸಾರ್ಥಕ ಸಾವಿರ ದಿನ, ಒಂದು ಲಕ್ಷ ಕುಟುಂಬಗಳಿಗೆ ಹಕ್ಕು ಪತ್ರ ವಿತರಣಾ ಕಾರ್ಯಕ್ರಮ ನಡೆಯಿತು. ಬೆಳಗ್ಗೆ 10.30ಕ್ಕೆ ಆರಂಭವಾಗಬೇಕಿದ್ದ ಪ್ರಾರಂಭ ಕಾರ್ಯಕ್ರಮ 12 ಗಂಟೆಯಾದರೂ ಶುರುವಾಗಿರಲಿಲ್ಲ. ಆರಂಭದಲ್ಲಿ ಕಂದಾಯ ಸಚಿವ ಕೃಷ್ಣಭೈರೇಗೌಡ ಕಾರ್ಯಕ್ರಮಕ್ಕೆ ಎಲ್ಲರನ್ನು ಸ್ವಾಗತಿಸಿದರು. ಕೆಲವು ಸಾಂಸ್ಕೃತಿಕ ಕಾರ್ಯಕ್ರಮಗಳ ನಡುವೆ ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್ ಮಾತನಾಡಿದರು. ಈಹಂತದಲ್ಲಿ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಾಗಲಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಪ್ರಮುಖ ಸಚಿವರು ಹಾಜರಿರಲಿಲ್ಲ. ಗೃಹ ಸಚಿವ ಪರಮೇಶ್ವರ್ ಎಲ್ಲರಿಗಿಂತ ಮೊದಲು ಬಂದಿದ್ದರು. ಔಪಚಾರಿಕವಾಗಿ ಸ್ವಾಗತ ಕೋರುವಾಗ ರಾಘವೇಂದ್ರ ಹಿಟ್ನಾಳ್ ಅವರು ಪರಮೇಶ್ವರ್ ಅವರನ್ನು ಕುರಿತು ಹಿರಿಯ ಸಚಿವರು ಮಾರ್ಗದರ್ಶಕರು ಹಾಗೂ ಮುಂದೆ ನಾಡಿನ ಮುಖಂಡರಾಗಲಿರುವ ಡಾ.ಜಿ.ಪರಮೇಶ್ವರ್ ಅವರಿಗೆ ಸ್ವಾಗತ ಎಂದು ಸಂಬೋಧಿಸಿದರು. ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಾಗಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಅವರ ಬೆಂಬಲಿಗರು ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಇದಕ್ಕೆ ಪ್ರತಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲಿಗರು ನಾನಾ ರೀತಿಯ ತಂತ್ರಗಾ–ರಿಕೆಗಳನ್ನು ರೂಪಿಸುತ್ತಿದ್ದಾರೆ. ಒಂದು ವೇಳೆ ಸಿದ್ದರಾಮಯ್ಯ ಅವರ ಬದಲಾವಣೆಯಾದರೆ ದಲಿತ ಸಮುದಾಯಕ್ಕೆ ಸೇರಿದ ನಾಯಕರನ್ನು ಮುಖ್ಯಮಂತ್ರಿಯನ್ನಾಗಿ ಮಾಡಬೇಕು ಎಂದು ಪರ್ಯಾಯ ತಂತ್ರಗಾರಿಕೆಯನ್ನು ಮುಂದಿಟ್ಟಿದೆ. ದಲಿತ ಸಮುದಾಯದ ನಾಯಕರಲ್ಲಿ ಪರಮೇಶ್ವರ್ ಮುಂಚೂಣಿಯಲ್ಲಿದ್ದಾರೆ. ಇದು ಡಿಕೆ ಶಿವಕುಮಾರ್ ಅವರ ಬಣಕ್ಕೆ ಮಾಸ್ಟರ್ ಸ್ಟ್ರೋಕ್ ನೀಡಿದಂತಾಗಿದೆ. ರಾಘವೇಂದ್ರ ಹಿಟ್ನಾಳ್ ಅವರು ಸಿದ್ದರಾಮಯ್ಯ ಪರಮಾಪ್ತ ಬಣದಲ್ಲಿ ಗುರುತಿಸಿಕೊಂಡಿದ್ದಾರೆ. ಬಾಕಿ ಇರುವ ಅವಧಿಗೂ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯಬೇಕು ಎಂಬುದು ಪ್ರತಿತಂತ್ರದ ಪ್ರಮುಖ ಬೇಡಿಕೆಯಾಗಿದೆ. ಖುದ್ದು ರಾಘವೇಂದ್ರ ಹಿಟ್ನಾಳ್ ಅವರೇ ಪರಮೇಶ್ವರ್ ಅವರನ್ನು ಮುಂದಿನ ನಾಯಕರಾಗುವವರು ಎಂದು ಹೇಳುವ ಮೂಲಕ ಹೊಸ ಆಯಾಮ ನೀಡಿದ್ದಾರೆ. ಪರಮೇಶ್ವರ್ ಮತ್ತು ಡಿ.ಕೆ.ಶಿವಕುಮಾರ್ ಒಂದು ಕಾಲದಲ್ಲಿ ಪರಮಾಪ್ತ ಸ್ನೇಹಿತರಾಗಿದ್ದರು. ಆದರೆ ಪರಮೇಶ್ವರ್ ಉಪಮುಖ್ಯಮಂತ್ರಿಯಾಗಲು ಡಿ.ಕೆ.ಶಿವಕುಮಾರ್ ಅಡ್ಡಿ ಪಡಿಸಿದ್ದಾರೆ ಎಂಬ ವದಂತಿಗಳಿವೆ. ಈ ಹಿನ್ನೆಲೆಯಲ್ಲಿ ಪರಮೇಶ್ವರ್ ಅವರು ಸಿದ್ದರಾಮಯ್ಯ ಗುಂಪಿಗೆ ನೆಗೆದಿದ್ದರು.

## ಇಂದು ಅಂಬಿಗರ ಚೌಡಯ್ಯನವರ ಪ್ರತಿಮೆ ಅನಾವರಣ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯ ವೃತ್ತ,ನೂತನ ಸಭಾಭವನ ಉದ್ಘಾಟನೆ ಹಾಗೂ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಅನುಭವ ಮಂಟಪದ ಶಂಕುಸ್ಥಾಪನೆ ಇಂದು ನಡೆಯಲಿದೆ.**

ಕಾರ್ಯಕ್ರಮದ ಅಂಗವಾಗಿ ಮುಂಜಾನೆ 7:30 ಘಂಟೆಗೆ ಪಟ್ಟಣದ ಭೀಮನ ಭಾವಿಯಿಂದ ಸುಮಂಗಲೆಯರಿಂದ ಕುಂಭ ಕಳಸದೊಂದಿಗೆ ಗಂಗಸ್ಥಳಕ್ಕೆ ಪೂಜೆ ಸಲ್ಲಿಸಿ ನಂತರ ಜಗದ್ಗುರು ಪೂಜ್ಯಶ್ರೀ ಚೌಡಯ್ಯ ಮಹಾಸ್ವಾಮಿಗಳನ್ನು ಬೆಳ್ಳಿರಥದಲ್ಲಿ ಭವ್ಯ ಮೆರವಣಿಗೆಯೊಂದಿಗೆ ಪಟ್ಟಣದ ಪ್ರಮುಖ ಬೀದಿಯಲ್ಲಿ ಸಾಗಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ವೃತ್ತದ ವರೆಗೆ ಸಕಲ ವಾದ್ಯ ಮೇಳಗಳೊಂದಿಗೆ ನಡೆಯುವುದು. ಬೆಳಿಗ್ಗೆ 11



ಗಂಟೆಗೆ ಅಂಬಿಗರ ಚೌಡಯ್ಯನವರ ವೃತ್ತದಲ್ಲಿ ಅವರ ಪ್ರತಿಮೆಯ ವೃತ್ತದ ಅನಾವರಣ ಮಾಡಲಾಗುವುದು. ಮಧ್ಯಾಹ್ನ 12:00 ಘಂಟೆಗೆ ಪಟ್ಟಣದ ವಿದ್ಯಾ ಭಾರತಿ ಪ್ರೌಢಶಾಲೆ ಆವರಣದಲ್ಲಿ ಧರ್ಮಸಭೆ ನಡೆಯುವುದು. ಇದರ ದಿವ್ಯ ಸಾನಿಧ್ಯವನ್ನು ಜಗದ್ಗುರು ಪೂಜ್ಯಶ್ರೀ ಶಾಂತ ಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಹಾಗೂ ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು ವಹಿಸುವರು. ಕೆ ಎಸ್ ಡಿ ಎಲ್ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡರು ಸಮಾರಂಭ ಉದ್ಘಾಟಿಸುವರು.

ನಿಜಶರಣ ಅಂಬಿಗರ ಚೌಡಯ್ಯ ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ್ ತಂಗಡಗಿ ಅಧ್ಯಕ್ಷತೆ ವಹಿಸುವರು. ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಚೌಡಯ್ಯನವರ ಭಾವಚಿತ್ರಕ್ಕೆ ಹಾಗೂ ಜಗನ್ಮಾತೆ ಗಂಗಾಪರಮೇಶ್ವರಿ ಭಾವಚಿತ್ರಕ್ಕೆ ಶ್ರೀಮತಿ ಮಾಲಾ ಜಿ. ನಾರಾಯಣರಾವ್ ಪುಷ್ಪಾರ್ಚನೆ ಮಾಡುವರು. ಮಾಜಿ ಸಚಿವ ಪ್ರಮೋದ ಮಧ್ವರಾಜ್ ಹಾಗೂ ಮಾಜಿ ಶಾಸಕ ಎ. ಎಸ್.ಪಾಟೀಲ ನಡಹಳ್ಳಿ ಚೌಡಯ್ಯನವರ ಪ್ರತಿಮೆ ವೃತ್ತ ಅನಾವರಣಗೊಳಿಸುವರು. ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಹಾಗೂ ಮಾಜಿ ಶಾಸಕ ಶರಣಪ್ಪ ಸುಣಗಾರ ಅನುಭವ ಮಂಟಪದ ಶಂಕುಸ್ಥಾಪನೆ ನೆರವೇರಿಸುವರು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಹಾಗೂ ಜಿ.ಪಂ.ಮಾಜಿ ಸದಸ್ಯ ಮಹಾಂತಗೌಡ ಪಾಟೀಲ ಸಮುದಾಯ ಭವನ ಉದ್ಘಾಟನೆ ಮಾಡುವರು. ಮುಖ್ಯ ಅತಿಥಿಗಳಾಗಿ ಬಸವರಾಜ್ ಸಪ್ಪನಗೋಳ, ಬಿ.ಕೆ.ಮೋಹನ ಕುಮಾರ, ಶಿವಕುಮಾರ ನಾಟೀಕಾರ,ಜೆ.ಟಿ.ವೆಂಕಟೇಶ, ಡಾ.ಎಸ್. ಕೆ.ಮೇಲಕಾರ, ಎಲ್ ಸಿ ಕೋಲ್ಕಾರ, ಶಿವಾಜಿ ಮೆಟಗಾರ ಅಮರೇಶಣ್ಣ ಕಾಮನಕೇರಿ ಆಗಮಿಸುವರು. ಕಾರ್ಯಕ್ರಮದಲ್ಲಿ ಪಟ್ಟಣ ಹಾಗೂ ತಾಲೂಕಿನಿಂದ ಸುಮಾರು 2 ಸಾವಿರಕ್ಕಿಂತಲೂ ಹೆಚ್ಚು ಜನರು ಭಾಗವಹಿಸಲಿದ್ದು ಸರ್ವ ಸಮಾಜದ ಗಣ್ಯರು ಹಿರಿಯರನ್ನು ಆಮಂತ್ರಿಸಲಾಗುತ್ತಿದ್ದು ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಬೇಕೆಂದು ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ ತಂಗಡಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಸನಾಪುರದಲ್ಲಿ ಇದೇ 16 ರಂದು ಕಳಸಾರೋಹಣ, ಪ್ರತಿಷ್ಠಾಪನೆ

ನೈಜ್ಯ ದೆಸೆ ನ್ಯೂಸ್

**ಸುರಪುರ: ನಗರಸಭೆ ವ್ಯಾಪ್ತಿಯ ಹಸನಾಪುರದಲ್ಲಿ ಶ್ರೀ ತಾಳಿಕೋಟಿ ಮರೆಮ್ಮ ದೇವಿಯ ನೂತನ ದೇವಸ್ಥಾನದ ಉದ್ಘಾಟನೆ ಹಾಗೂ ಶ್ರೀ ಮರೆಮ್ಮ ದೇವಿಯ ರಜತ ಮೂರ್ತಿಯ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಮಹೋತ್ಸವವನ್ನು ಹಸನಾಪುರ ಗ್ರಾಮದವರುಅದ್ದೂರಿಯಾಗಿ ಆಚರಿಸಲಾಗುತ್ತದೆ.**

16 ರಂದು ಸೋಮವಾರ ಬೆಳಿಗ್ಗೆ



10 ಗಂಟೆಗೆ ಶ್ರೀ ಜೋಡಿ ಮರೆಮ್ಮ ದೇವಿ ದೇವಸ್ಥಾನದಿಂದ ಶ್ರೀ ತಾಳಿಕೋಟಿ ಮರೆಮ್ಮ ದೇವಿ



ಮೂರ್ತಿಯನ್ನು ಗಂಗಾ ಸ್ನಾನವನ್ನು ಮಾಡಿಸಿ ಕಳಸ ಮತ್ತು ಘಂಟೆ ಯೊಂದಿಗೆ ವಾದ್ಯಗಳ ಮೂಲಕ ಮುತ್ತೈದೆಯ–ರಿಂದ ಕುಂಭ ಕಳಸಗಳನ್ನು ಶ್ರೀ ಜೋಡಿ ಮರೆಮ್ಮ ದೇವಸ್ಥಾನ, ಡಾ.ಬಿ.ಆರ್.ಅಂಬೇಡ್ಕರ್ ಚೌಕ್, ಟಿಪ್ಪು ಸುಲ್ತಾನ ಚೌಕ್,ನಗರ ವೇಶ್ವರ ದೇವಾಸ್ಥಾನ ರಸ್ತೆ, ಮರಗಮ್ಮ ದೇವಸ್ಥಾನ, ಮಂಗಲ ಬಜಾರ, ತರಕಾರಿ ಮಾರುಕಟ್ಟೆ ರಸ್ತೆಯ ಮೂಲಕ ಅದ್ದೂರಿ ಮೆರವಣಿಗೆಯೊಂದಿಗೆ ಹಸನಾಪುರದವರೆಗೆ ಆಗಮಿಸ ಲಾಗುವುದು.ತಾಲೂಕ ಆರೋಗ್ಯ ಅಧಿಕಾರಿ ಡಾ.ರಾಜಾ ವೆಂಕಪ್ಪ ನಾಯಕ ಹಾಗೂ ಮಕ್ಕಳ ವೈದ್ಯಾಧಿಕಾರಿ ಡಾ.ಮುಕುಂದ ಯನಗುಂಟಿ ಅವರು ಮೆರವಣಿಗೆಗೆ ಚಾಲನೆ ನೀಡುವರು. ಸಾಯಂಕಾಲ 05 ಗಂಟೆಗೆ ಕಳಸಾರೋಹಣ ಮತ್ತು ಪ್ರಾಣಪ್ರತಿಷ್ಠಾಪನ ನಡೆಯುವುದು.ಮಾಜಿ ಸಚಿವ

## ಜಾನಪದ ಎಂದಿಗೂ ನಶಿಸುವುದಿಲ್ಲ: ಡಾ ಜಾನಪದ ಎಸ್ ಬಾಲಾಜಿ

ನೈಜ್ಯ ದೆಸೆ ನ್ಯೂಸ್

**ಪಾಂಡವಪುರ: ಲಕ್ಷ್ಮಿ ಸಾಗರದ ಮಂಡ್ಯ ಆಂಜನೇಯ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಿದ ಕನ್ನಡ ಜಾನಪದ ಪರಿಷತ್ ತಾಲೂಕು ಘಟಕದ ಉದ್ಘಾಟನೆಯನ್ನು ಡೊಳ್ಳು ಬಾರಿಸುವುದು ನೆರವೇರಿಸಿ ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷರು ಹಾಗೂ ಭಾರತ ಸರ್ಕಾರದ ಐಸಿಸಿಆರ್ ಸದಸ್ಯರು ಡಾ ಜಾನಪದ ಇಸ್ ಬಾಲಾಜಿ ಮಾತನಾಡುತ್ತಾ ಇತ್ತೀಚಿನ ದಿನಗಳಲ್ಲಿ ಪಾಶ್ಚಾತ್ಯ ಸಂಸ್ಕೃತಿ ಹಾಗೂ ಆದ–ನಿಕರಣದ ಭರಾಟೆಯಲ್ಲಿ ಜಾನಪದ ನಶಿಸಿದಂತೆ ಕಂಡರೂ ಎಂದಿಗೂ ನಶಿಸುವುದಿಲ್ಲ ಕಾಲಕ್ರಮಣದಲ್ಲಿ ಪರಿವರ್ತನೆಗೊಳ್ಳುತ್ತದೆ, ಇದು ಯಾವುದೇ ಜಾತಿ ಧರ್ಮಕ್ಕೆ ಸೀಮಿತವಾಗಿಲ್ಲ, ಮಾನವೀಯ ಮೌಲ್ಯಗಳು ಹಾಗೂ ಜೀವನದ ಪಾಠ ಒಳಗೊಂಡಿರುತ್ತದೆ, ಸರ್ಕಾರ ಮೂಲ**



**ಜನಪದ ಕಲಾವಿದರ ಆ ಶಾಸನವನ್ನು 5000ಕ್ಕೆ ಏರಿಸಬೇಕು, ವಯೋಮಿತಿಯನ್ನು 45ಕ್ಕೆ ಇಳಿಸಬೇಕು ಹಾಗೂ ಗ್ರಾಮ ಪಂಚಾಯತಿ ಶೇಕಡ 2% ಅನುದಾನವನ್ನು ಜನಪದ ಕಲಾವಿದ.**

ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಜಿಲ್ಲಾಧ್ಯಕ್ಷ ಡಾ ವಿಜಯಕೊಪ್ಪ ಮಾತನಾಡಿ ಮಂಡ್ಯ ಜಿಲ್ಲೆಯಲ್ಲಿ ಜನಪದ ಕಲೆ ಮತ್ತು ಕಲಾವಿದರ ಸಂರಕ್ಷಣೆಗಾಗಿ ಕನ್ನಡ ಜಾನಪದ ಪರಿಷತ್ ಮಂಡ್ಯ ಜಿಲ್ಲಾ ಘಟಕ ಸಮುಸುತ್ತಿದೆ, ಮುಂದಿನ ದಿನಗಳಲ್ಲಿ ಪ್ರತಿ ಗ್ರಾಮದಲ್ಲೂ ಘಟಕ ಮಾಡಲಾಗುವುದೆಂದು ತಿಳಿಸಿದರು.

ರಾಮನಗರ ಜಿಲ್ಲೆ ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಕೆ ಸಿ ಕಾಂತಪ್ಪ ಮಾತನಾಡಿ ಪರಿಷತ್ತಿನ ದಶಮಾನೋತ್ಸವ ಸಂದರ್ಭದಲ್ಲಿ ಪಾಂಡುಪುರ ತಾಲೂಕ್ ಘಟಕ ಉದ್ಘಾಟನೆ ಆಗಿರುವುದು ವಿಶೇಷ , ಮುಂದಿನ ದಿನಗಳಲ್ಲಿ ರಾಮನಗರ ಹಾಗೂ ಮಂಡ್ಯ ಜಿಲ್ಲೆ ಜಂಟಿ ಸಮ್ಮೇಳನ ಏರ್ಪಡಿಸಲಾಗುವುದು ಎಂದು ತಿಳಿಸಿದರು. ಕನ್ನಡ ಜಾನಪದ ಪರಿಷತ್ತಿನ ಪಾಂಡುಪುರ ತಾಲೂಕು ಅಧ್ಯಕ್ಷರಾಗಿ ಶ್ರೀ ಎಲ್ ಚಂದ್ರ ಅವರಿಗೆ ಧ್ವಜ ಹಾಗೂ ಪದಪತ್ರ ನೀಡುವ ಮೂಲಕ ರಾಜ್ಯಾಧ್ಯಕ್ಷರು ಹಾಗೂ ಜಿಲ್ಲಾಧ್ಯಕ್ಷರು ಪರಪ್ರದಾನ ಮಾಡಿದರು.

ಕೆರೆತಣ್ಣೂರಿನ ಸ್ವಾಮಿಗೌಡ ಹಾಗೂ ಆಕಾಶ್ ತಂಡದವರಿಂದ ಸಾಂಸ್ಕೃತಿ ಕಾರ್ಯಕ್ರಮಗಳು ಏರ್ಪಡಿಸಲಾಗಿತ್ತು. ಅಂತರಾಷ್ಟ್ರೀಯ ಕಲಾವಿದ ಸೋಬಾನೆ ಕೃಷ್ಣೇಗೌಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಲ್ ಬಿ ಕೆಂಪೇಗೌಡ ಲಕ್ಷ್ಮೀಸಾಗರ, ಕೃಷ್ಣೆ ಗೌಡ,ಶಿವಣ್ಣ ಗೌಡ್ರು, ಅಖಿಲೇಶ್, ಬಾರತಿ ಕುಮಾರ್ ಉಪಸ್ಥಿತರಿದ್ದರು.

## ಮಾಗಡಿಯಲ್ಲಿ 350 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ: ಹೆಚ್.ಸಿ. ಬಾಲಕೃಷ್ಣ

ನೈಜ್ಯ ದೆಸೆ ನ್ಯೂಸ್

**ಮಾಗಡಿ: ಪಟ್ಟಣದ ಐಡಿಎಸ್ ಎಂಟಿ ಬಡಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರ ವಿಶೇಷ ಅನುದಾನದ ಸುಮಾರು 5 ಕೋಟಿ ರೂ. ವೆಚ್ಚದಲ್ಲಿ ಚರಂಡಿ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಪಟ್ಟಣದ ಮೂಲ ಸೌಕರ್ಯಗಳನ್ನು ಸುಧಾರಿಸುವುದೇ ಇದರ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.**

ಐಡಿಎಸ್ಎಂಟಿ ಯೋಜನೆಯಲ್ಲಿ ನಡೆದಿರುವ ಅವ್ಯವಹಾರಗಳನ್ನು ಗುರುತಿಸಿ, ಸುಮಾರು 70ರಿಂದ 80 ಕೋಟಿ ರೂ. ಪುರಸಭೆಗೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ. ಆ ಹಣವನ್ನು ಸಂಪೂರ್ಣವಾಗಿ ಅಂಗಡಿ ಮಳಿಗೆಗಳ ನಿರ್ಮಾಣ–ಕ್ಕೆ ಬಳಸುವ ಯೋಜನೆ ರೂಪಿಸಲಾಗಿದೆ. ಮಾರುಕಟ್ಟೆ ವಾಣಿಜ್ಯ ಪ್ರದೇಶದಲ್ಲಿ ಅಂಗಡಿಗಳನ್ನು ನಿರ್ಮಿಸಿ, ಅಗತ್ಯವಿದ್ದರೆ ಪ್ರದರ್ಶನ ಮಳಿಗೆಗಳನ್ನೂ ಕಟ್ಟಿಕೊಡಲಾಗುತ್ತದೆ. ಐಡಿ ಎಸ್ ಎಂ ಟಿ ಲೇಔಟ್



ನಲ್ಲಿ 212 ನಿವೇಶನ ಪುರಸಭೆಗೆ ಸೇರಿವೆ ಇವುಗಳನ್ನು ಸಾರ್ವಜನಿಕವಾಗಿ ಹರಾಜು ಮಾಡಿ ಇದ–ರಿಂದ ಬರುವ ಹಣವನ್ನು ಅಂಗಡಿ ಮಳಿಗೆಯನ್ನು ನಿರ್ಮಿಸಿ ಪುರಸಭೆಗೆ ತಿಂಗಳಿಗೆ ಕನಿಷ್ಠ 50ರಿಂದ 60 ಲಕ್ಷ ರೂ. ಬಾಡಿಗೆ ಆದಾಯ ಬರಬೇಕೆಂಬ ಗುರಿ ಇಟ್ಟುಕೊಳ್ಳಲಾಗಿದೆ. ಜೊತೆಗೆ ಪುರಸಭೆ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ ಶೌಚಾಲಯದ ಅಗತ್ಯವಿದೆ ಅಲ್ಲೆಲ್ಲ ನಿರ್ಮಿಸಲಾಗುವುದು ಎಂದು ಹೇಳಿದರು.

ಮಾಗಡಿಯಲ್ಲಿ ಒಟ್ಟು 350 ಕೋಟಿ ರೂ. ವೆಚ್ಚದಲ್ಲಿ ರಸ್ತೆಗಳು, ಕೆರೆಗಳು, ಕ್ರೀಡಾಂಗಣ, ಕಾಲೇಜು ಮೈದಾನ ಹಾಗೂ ಶ್ರೀ ರಂಗನಾಥ–ಸ್ವಾಮಿ ದೇವಸ್ಥಾನವರೆಗೆ ಕಾಂಕ್ರೀಟ್ ರಸ್ತೆ ನಿರ್ಮಾಣ ಸೇರಿದಂತೆ ಹಲವು ಕಾಮಗಾ–ರಿಗಳಿಗೆ ಚಾಲನೆ ನೀಡಲಾಗಿದೆ. ಇದಲ್ಲದೆ, 103 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಗುತ್ತಿಗೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

ಪುರಸಭೆ ಚುನಾವಣೆಯಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿದರೆ ಇನ್ನಷ್ಟು ವೇಗವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ಜನರಲ್ಲಿ ಮನವಿ ಮಾಡಿಕೊಳ್ಳುತೇನೆ ಎಂದು ಎಚ್ ಸಿ ಬಾಲಕೃಷ್ಣರವರು ಹೇಳಿದರು.

ಕೆಂಪೇಗೌಡರ ಕಾಲದ ಕೆಂಪಸಾಗರ ಕೆರೆ ತೆಪ್ಪೋತ್ಸವಕ್ಕೆ ಶಾಸಕ ಎಚ್ ಸಿ ಬಾಲಕೃಷ್ಣರವರು ಚಾಲನೆ ನೀಡಿ ಮಾತನಾಡಿದರು ಈ ಭಾಗದ ಗ್ರಾಮಸ್ಥರು ಇಂದಿನಿಂದಲೂ ಕೆರೆ ಕೋಡಿಯದ ನಂತರ ತೆಪ್ಪೋತ್ಸವ ಮಾಡುವುದು ವಾಡಿಕೆ. ಅದರಂತೆ ಈ ಬಾರಿನೂ ಕೆರೆ ಕೋಡಿ ಭಾಗದಲ್ಲಿ ತೆಪ್ಪಕ್ಕೆ ಪೂಜೆ ಸಲ್ಲಿಸಿ ತೆಪ್ಪದಲ್ಲಿ ಒಂದು ಕಳಸು ಮತ್ತು ಮೇಕೆಯನ್ನು ಕಟ್ಟಿ ಕೊಡಿಯ ಬಳಿಗೆ ತಾನಾಗಿಯೇ ಬಂದು ಸೇರುತ್ತದೆ ಎಂದು ವಾಡಿಕೆ ಇದೆ. ಕೆಂಪಸಾಗರ ಗೇಟ್ ನಿಂದ ಹಾಲ ಶೆಟ್ಟಹಳ್ಳಿಯ ವರೆಗೆ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುತ್ತಿದ್ದು ಗ್ರಾಮಸ್ಥರ ತಿಳಿಸುವ ರೀತಿ ಕೆಂಪಸಾಗರ ಕೆರೆಯನ್ನು ಸಹ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಪುರಸಭೆ ಸ್ಥಾಯಿಸಮಿತಿ ಮಾಜಿ ಅಧ್ಯಕ್ಷ ಶಿವಕುಮಾರ್, ಮಾಜಿ ಅಧ್ಯಕ್ಷೆ ವಿಜಯಾರೂಪೇಶ್, ನಾಮಿನಿ ಸದಸ್ಯರಾದ ಕೃಷ್ಣಪ್ಪ, ಕಬಡ್ಡಿ ಪ್ರಕಾಶ್, ಕಲ್ಯಾಗೇಟ್ ಆನಂದ್, ತಾಲ್ಲೂಕು ಒಕ್ಕಲಿಗರ ಸಂಘದ ನಿರ್ದೇಶಕ ಧಾಬಾ ರಮೇಶ್, ತಿಗಳ ಸಮುದಾಯದ ಯಜಮಾನ್ ಸಿದ್ದರಾಜು, ಗುತ್ತಿಗೆದಾರ ದೇವರಾಜ್, ಹೊಸಪೇಟೆ ಡೈರಿ ಅಧ್ಯಕ್ಷ ಮಂಜುನಾಥ್, ಕೈ ಮುಖಂಡರಾದ ಹೆಚ್. ಆರ್ ರಂಗನಾಥಯ್ಯ, ತಿರುಮಲೆ ಡೈರಿ ಬಸವರಾಜು, ಗುರುಸಿದ್ದಪ್ಪ, ಬಲರಾಮ್, ಪಾಟೀಲ್ ರಂಗನಾಥ್, ಕಬ್ಬಡ್ಡಿ ನಟರಾಜು, ವಿಶ್ವನಾಥ್, ಮಾಗಡಿರಂಗಯ್ಯ ಸೇರಿದಂತೆ ಮತ್ತಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬ್ಯಾಚುಲರ್ ಆಫ್ ಫಿಸಿಯೋಥೆರಪಿ

ಬ್ಯಾಚುಲರ್ ಆಫ್ ಫಿಸಿಯೋಥೆರಪಿ ಭೌತಚಿಕಿತ್ಸೆಯು ವಿದ್ಯಾರ್ಥಿಗಳಿಗೆ ಅತ್ಯಂತ ಭರವಸೆಯ ವೃತ್ತಿಗಳಲ್ಲಿ ಒಂದಾಗಿದೆ. ದೈಹಿಕ ಅಪಸಾಮಾನ್ಯ ಕ್ರಿಯೆಗಳನ್ನು ತಡೆಗಟ್ಟುವುದು ಅಥವಾ ಗುಣಪಡಿಸುವುದು ನಿಮ್ಮ ಆಸಕ್ತಿಯಾಗಿದ್ದರೆ, ಭೌತಚಿಕಿತ್ಸೆಯು ಅತ್ಯಂತ ಯಶಸ್ವಿ ವೃತ್ತಿಜೀವನದ ಆಯ್ಕೆಗಳಲ್ಲಿ ಒಂದಾಗಿದೆ. ಭೌತಚಿಕಿತ್ಸಕರು ಆರೋಗ್ಯ ರಕ್ಷಣಾ ತಂಡದ ಭಾಗವಾಗಿದ್ದು, ವ್ಯಾಯಾಮ, ಹಸ್ತಚಾಲಿತ ಚಿಕಿತ್ಸೆ, ಪುನರ್ವಸತಿ ತಂತ್ರಗಳು ಮತ್ತು ದೈಹಿಕ ಚಟುವಟಿಕೆಯನ್ನು ಬಳಸಿಕೊಂಡು ರೋಗಿಗಳನ್ನು ಔಷಧಿಗಳಿಲ್ಲದೆ ಸಾಮಾನ್ಯ ಸ್ಥಿತಿಗೆ ತರುವ ಜವಾಬ್ದಾರಿಯನ್ನು ಹೊಂದಿರುತ್ತಾರೆ. ಭೌತಚಿಕಿತ್ಸಕರಾಗಲು, ನೀವು ಬ್ಯಾಚುಲರ್ ಆಫ್ ಫಿಸಿಯೋಥೆರಪಿಯನ್ನು ಆರಿಸಿಕೊಳ್ಳಬೇಕು. ಈ ಬ್ಲಾಗ್‌ನಲ್ಲಿ, ಬ್ಯಾಚುಲರ್ ಆಫ್ ಫಿಸಿಯೋಥೆರಪಿಯ ಪ್ರಮುಖ ಅಂಶವನ್ನು ನಾವು ಅರ್ಥಮಾಡಿಕೊಳ್ಳುತ್ತೇವೆ. ಆದ್ದರಿಂದ ನಿಮ್ಮನ್ನು ಇನ್ನು ಮುಂದೆ ಕಾಯುವಂತೆ ಮಾಡಬೇಡಿ ಮತ್ತು ನಮ್ಮ ಮೊದಲ ವಿಷಯಕ್ಕೆ ನೇರವಾಗಿ ಹೋಗೋಣ. (BPT) ಎಂಬುದು 4.5 ವರ್ಷಗಳ (4 ವರ್ಷದ ಶಿಕ್ಷಣ + 6 ತಿಂಗಳ ಇಂಟರ್ನ್‌ಶಿಪ್) ಅವಧಿಯ ಪದವಿಪೂರ್ವ ಕೋರ್ಸ್ ಆಗಿದೆ. ಇದು ಔಷಧಿಗಳಿಲ್ಲದೆ ದೈಹಿಕ ವ್ಯಾಯಾಮ, ಶಾಖ ಮತ್ತು ಯಾಂತ್ರಿಕ ಒತ್ತಡದ ಮೂಲಕ ರೋಗಿಗಳಿಗೆ ಚಿಕಿತ್ಸೆ ನೀಡುವ ವಿಧಾನವನ್ನು ಕಲಿಸುತ್ತದೆ. 10+2 ಪರೀಕ್ಷೆಯಲ್ಲಿ ವಿಜ್ಞಾನ (PCB) ವಿಷಯಗಳೊಂದಿಗೆ 50% ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಅರ್ಹರು. ಮಾನವ ಅಂಗರಚನಾಶಾಸ್ತ್ರದ ವಿವಿಧ ಅಂಶಗಳು ವಿವಿಧ ಜೀವಿಗಳ ವಿವರವಾದ ತಿಳುವಳಿಕೆ. ಬಹು ಸ್ಥಳ ಸಮಸ್ಯೆಗಳನ್ನು ಹೇಗೆ ಪರಿಹರಿಸುವುದು ಸ್ನಾಯು ಸಮಸ್ಯೆಗಳ ಚಿಕಿತ್ಸೆಯ ಬಗ್ಗೆ ಆಳವಾದ ಕಲಿಕೆ. ಃಕಖಿ ಕೋರ್ಸ್‌ನ ಪ್ರಮುಖ ವಿವರಗಳು: ಕೋರ್ಸ್ ಹೆಸರು: ಬ್ಯಾಚುಲರ್ ಆಫ್ ಫಿಸಿಯೋಥೆರಪಿ (BPT) ಅವಧಿ: 4 ವರ್ಷದ ಶೈಕ್ಷಣಿಕ ಶಿಕ್ಷಣ + 6 ತಿಂಗಳ ಕಡ್ಡಾಯ ಇಂಟ–ರ್ನ್‌ಶಿಪ್ ಅರ್ಹತೆ: 12ನೇ ತರಗತಿಯಲ್ಲಿ (PUC) ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ (PCB) ದೊಂದಿಗೆ ಕನಿಷ್ಠ 50% – 55% ಅಂಕಗಳು ಪ್ರವೇಶ ವಿಧಾನ: ಕೆಸಿಇಟಿ (KCET), NEET, ಅಥವಾ ಆಯಾ ವಿಶ್ವವಿದ್ಯಾಲಯಗಳ ಪ್ರವೇಶ ಪರೀಕ್ಷೆಗಳು ಪ್ರಮುಖ ವಿಷಯಗಳು: ಅನಾಟಮಿ (Anatomy), ಫಿಸಿಯಾಲಜಿ (Physiology), ಬಯೋಮೆಕಾನಿಕ್ಸ್ (Biomechanics), ವ್ಯಾಯಾಮ ಚಿಕಿತ್ಸೆ (Exercise Therapy), ಮತ್ತು ಪುನರ್ವಸತಿ ತಂತ್ರಗಳು ಉದ್ಯೋಗಾವಕಾಶಗಳು: ಆಸ್ಪತ್ರೆಗಳು, ಕ್ರೀಡಾ ತಂಡಗಳು, ಫಿಟ್‌ನೆಸ್ ಕೇಂದ್ರಗಳು, ಪುನರ್ವಸತಿ ಕೇಂದ್ರಗಳು (Rehabilitation centers), ಮತ್ತು ಸ್ವಂತ ಕ್ಲಿನಿಕ್ Krupanidhi Group of Institutions Krupanidhi Group of Institutions +4 ಕೋರ್ಸ್‌ನ ಮುಖ್ಯಾಂಶಗಳು: ಔಷಧ ರಹಿತ ಚಿಕಿತ್ಸೆ: ಇದು ಭೌತಿಕ ಶಕ್ತಿಗಳನ್ನು ಬಳಸಿ ಚಿಕಿತ್ಸೆ ನೀಡುವ ಕಲೆ. ಉದ್ಯೋಗ ಮಾರುಕಟ್ಟೆ: ಆಸ್ಪತ್ರೆಗಳು, ಕ್ರೀಡಾ ಚಿಕಿತ್ಸಾಲಯಗಳು ಮತ್ತು ಪುನರ್ವಸತಿ ಘಟಕಗಳಲ್ಲಿ ಹೆಚ್ಚಿನ ಬೇಡಿಕೆ ಇದೆ. ಪಠ್ಯಕ್ರಮ: ಮಸ್ಕ್ಯುಲೋಸ್ಕೆಲಿಟಲ್, ನರವೈಜ್ಞಾನಿಕ ಮತ್ತು ಉಸಿರಾಟದ ಪರಿಸ್ಥಿತಿಗಳ ಮೌಲ್ಯಮಾಪನ ಮತ್ತು ಚಿಕಿತ್ಸೆಯನ್ನು ಒಳಗೊಂಡಿರುತ್ತದೆ.

## ವಂದೇ ಭಾರತ್ ಎಕ್ಸ್‌ಪ್ರೆಸ್‌ನಲ್ಲಿ ಹಾವು ಬಿಟ್ಟ ವ್ಯಕ್ತಿ ಅರೆಸ್ಟ್

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ವಿಶ್ವ ಪ್ರಸಿದ್ಧ ಹಂಪಿ ಉತ್ಸವದಲ್ಲಿ ಸರ್ಕಾರಿ ಶಾಲಾ ಮಕ್ಕಳ ಕನಸಿಗೆ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ರೆಕ್ಕೆ ನೀಡಿದ್ದಾರೆ. ಬೈ ಸ್ಕೈ ವೀಕ್ಷಣೆಗೆ ಆಗಮಿಸಿದ್ದ 60ಕ್ಕೂ ಹೆಚ್ಚು ಶಾಲಾ ಮಕ್ಕಳಿಗೆ ಉಚಿತವಾಗಿ ಹೆಲಿಕಾಪ್ಟರ್ ರೈಡ್ ಮಾಡಿಸಿ, ಮಕ್ಕಳ ಕನಸು ನನಸು ಮಾಡಿದ್ದಾರೆ.**



ಕಮಲಾಪುರದ ಮಯೂರ ಹೋಟೆಲ್ ಆವರಣದಲ್ಲಿ ಹೆಲಿಕಾಪ್ಟರ್ ನೋಡಲು ಬಂದಿದ್ದ ಸರ್ಕಾರಿ ಶಾಲೆ ಮಕ್ಕಳ ಆಸೆ ಕೇಳಿದ ಸಚಿವರು, ನೀವೂ ಹೆಲಿಕಾಪ್ಟರ್‌ನಲ್ಲಿ ಹೋಗಬೇಕಾ ಎಂದು ಕೇಳಿದ್ದಾರೆ. ಸಚಿವರ ಪ್ರಶ್ನೆಗೆ ಮಕ್ಕಳೆಲ್ಲರೂ ಹೌದು ಸರ್ ಎಂದಿದ್ದಾರೆ. ತಕ್ಷಣವೇ ತಮ್ಮ ಸ್ವಂತ ಖರ್ಚಿನಲ್ಲಿ ಯೂನಿಫಾರ್ಮ್‌ನಲ್ಲಿದ್ದ ಎಲ್ಲಾ ಮಕ್ಕಳಿಗೆ ಸಚಿವರು ರೈಡ್ ವ್ಯವಸ್ಥೆ ಮಾಡಿದ್ದಾರೆ. ಆಕಾಶಕ್ಕೆ ಹಾರಿದ ಮಕ್ಕಳ ಸಂಭ್ರಮ ಕಂಡು ಕೆಳಗಡೆ ನಿಂತಿದ್ದ ಪೋಷಕರು ಆನಂದ ಬಾಷ್ಪ ಸುರಿಸಿದರು. ಮಕ್ಕಳ ಜಾಲಿ ಕಂಡು ಪೋಷಕರೂ ಸಂಭ್ರಮಿಸಿದ್ದಾರೆ.

# ಸಿದ್ದು ಬಜೆಟ್ ಸಿದ್ದತೆ ನಡುವೆ ಡಿಕೆಶಿ ದೆಹಲಿ ಭೇಟಿ: ಬಂದಿರೋದೇ ರಾಜಕಾರಣ ಮಾಡಲು, ಕಾಲ ಉತ್ತರ ಕೊಡುತ್ತೆ ಎಂದ ಡಿಸಿಎಂ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಗದ್ದಲ ತೀವ್ರಗೊಂಡಿದೆ. ಈ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿಯಲ್ಲಿ ಸಂಸದೆ ಪ್ರಿಯಾಂಕಾ ಗಾಂಧಿ ಅವರನ್ನು ಭೇಟಿ ಮಾಡಿ ಮಾತನಾಡಿದ್ದಾರೆ. ಸೋನಿಯಾ ಗಾಂಧಿ ಅವರ ನಿವಾಸಕ್ಕೆ ಆಗಮಿಸಿದ ಡಿಕೆಶಿ ಅಸ್ಸಾಂ ಚುನಾವಣೆಗೆ ಸಂಬಂಧಿಸಿದಂತೆ ಚರ್ಚೆ ನಡೆಸಿರುವುದಾಗಿ ತಿಳಿಸಿದ್ದಾರೆ. ಆದರೆ, ಅವರು ಆಡಿರುವ ಮಾತುಗಳು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.**

ಬಂದಿರೋದೇ ರಾಜಕಾರಣ ಮಾಡಲು : ಸೋನಿಯಾ ಗಾಂಧಿ ನಿವಾಸದಲ್ಲಿ ಪ್ರಿಯಾಂಕಾ ಗಾಂಧಿ ಅವರನ್ನು ಭೇಟಿ ಮಾಡಿದ ಡಿಕೆ ಶಿವಕುಮಾರ್ ಅವರು, ನಾನು ದೆಹಲಿಗೆ ಬಂದಿರೋದೇ ರಾಜಕಾರಣ ಮಾಡಲು. ಏನೂ ಮಾತನಾಡದೆ ಸುಮ್ಮನೆ ತೆರಳಲು ಸಾಧ್ಯವಾಗುತ್ತಾ? ಎಂದು ಪ್ರಶ್ನಿಸಿದ್ದಾರೆ.

ರೂಪೇಶ್ ಬಘೇಲ್ ಜೊತೆಗೆ ಪ್ರಿಯಾಂಕಾ ಗಾಂಧಿ ಅವರನ್ನು ಭೇಟಿ ಆದ ಡಿಕೆಶಿ ಅಸ್ಸಾಂ ಚುನಾವಣೆಗೆ ಬಗ್ಗೆ ಚರ್ಚೆ ನಡೆಸಿದ್ದಾರೆ. ಅಲ್ಲದೆ, ಇದೇ ಸಂದರ್ಭದಲ್ಲಿ ಬೇರೆ ರಾಜ್ಯಗಳ ಚುನಾವಣಾ ಸ್ಥಿತಿಗತಿಗಳ ಬಗ್ಗೆಯೂ ಚರ್ಚೆ ನಡೆಸಲಾಗಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದ್ದಾರೆ.





"ಪ್ರಿಯಾಂಕಾ ಗಾಂಧಿ ಅವರ ಜೊತೆಗೆ ಮಾತನಾಡಿದೆ ಎಂದು ಹೇಳಲು ಸಾಧ್ಯವಿಲ್ಲ. ಏನೆಲ್ಲಾ ಮಾತನಾಡಬೇಕು ಅದನ್ನು ಮಾತನಾಡಿದ್ದೇನೆ. ಎಲ್ಲಾ ವಿಚಾರಗಳು ಮಾತನಾಡಲೇ ಬೇಕಲ್ಲವೇ? ನಾನು ಇಲ್ಲಿಗೆ ಬಂದಿರುವುದೇ ರಾಜಕಾರಣ ಮಾಡಲು. ಎಲ್ಲಾ ವಿಚಾರ ಮಾತನಾಡದೆ ಸುಮ್ಮನೆ ಹೋಗಲು ಆಗುತ್ತಾ? ಕಾಲವೇ ಎಲ್ಲದಕ್ಕೂ ಉತ್ತರ ಕೊಡಲಿದೆ" ಎಂದರು.

ಡಿಸಿಎಂ ಬೇಡಿಕೆಗೆ ಹೈಕಮಾಂಡ್ ಸ್ಪಂದಿಸುತ್ತಾ ಬ್ರೇಕ್ ಫಾಸ್ಟ್ ಮೀಟಿಂಗ್ ಬಳಿಕ ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆಗಳಿಗೆ ತಕ್ಕ ಮಟ್ಟಿಗೆ ಕಡಿವಾಣ ಬಿದ್ದಿತ್ತು. ಆದರೆ ಇದೀಗ ಮತ್ತೊಮ್ಮೆ ಅದು ಮುನ್ನೆಲೆಗೆ ಬರುತ್ತಿದೆ. ಸಾಮಾನ್ಯವಾಗಿ ಬಜೆಟ್ ಪೂರ್ವಸಿದ್ದತಾ ಸಭೆಯಲ್ಲಿ ಸಿಎಂ ಜೊತೆಗೆ ಸಚಿವರು ಹಾಜರಿರುತ್ತಾರೆ. ಆದ–'ರೆ ಡಿಕೆ ಶಿವಕುಮಾರ್ ಬಜೆಟ್ ಸಿದ್ದತಾ ಸಭೆಗೆ ಗೈರಾಗಿ ದೆಹಲಿಗೆ ತೆರಳಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರ ಅನುಮತಿ ಪಡೆದುಕೊಂಡೇ ಅವರು ದೆಹಲಿಗೆ ತೆರಳಿದ್ದಾರೆ. ಆದರೆ ದೆಹಲಿಯಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ದೆಹಲಿಯಲ್ಲಿ ಪ್ರಿಯಾಂಕಾ ಗಾಂಧಿಯನ್ನು ಭೇಟಿಯಾದ ಸಂದರ್ಭದಲ್ಲಿ ಸೋನಿಯಾ ಗಾಂಧಿ ಜೊತೆಗೆ ಭೇಟಿ ಸಾಧ್ಯವಾಗಿದ್ಯಾ? ಎಂಬ ಪ್ರಶ್ನೆಗೆ ಡಿಕೆ ಶಿವಕುಮಾರ್ ಉತ್ತರ ನೀಡಿಲ್ಲ.

ರಾಹುಲ್ ಭೇಟಿ ಆಗ್ತಾರಾ? ರಾಜ್ಯದ ನಾಯಕತ್ವ ವಿಚಾರಾಗಿ ರಾಹುಲ್ ಗಾಂಧಿ ನಿರ್ಧಾರ ಅಂತಿಮ ಎಂಬುವುದು ಕಾಂಗ್ರೆಸ್ ನಾಯಕರ ನಿಲುವಾಗಿದೆ. ಆದರೆ ರಾಜ್ಯ ಕಾಂಗ್ರೆಸ್ ನಾಯಕತ್ವದ ಕುರಿತಾಗಿ ರಾಹುಲ್ ಗಾಂಧಿ ಏನು ನಿರ್ಧಾರ ಕೈಗೊಳ್ಳುತ್ತಾರೆ ಎಂಬುವುದು ಸ್ಪಷ್ಟಗೊಂಡಿಲ್ಲ. ಈ ಹಿಂದೆ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿದ್ದ ಸಂದರ್ಭದಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ್ದರು. ಆದರೆ ಡಿಕೆಶಿಗೆ ಸಾಧ್ಯವಾಗಿರಲಿಲ್ಲ.

ಆದರೆ ರಾಹುಲ್ ಗಾಂಧಿ ರಾಜ್ಯಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಪ್ರತ್ಯೇಕವಾಗಿ ಅವರನ್ನು ಭೇಟಿ ಮಾಡಿದ್ದರು. ಮೈಸೂರು ವಿಮಾನ ನಿಲ್ದಾಣದಲ್ಲಿ ಭೇಟಿ ಮಾಡಿ ಕೆಲ ಹೊತ್ತು ಮಾತುಕತೆ ನಡೆಸಿದ್ದರು. ಇದಾದ ಬಳಿಕ ಇದೀಗ ದೆಹಲಿಯಲ್ಲಿ ಮತ್ತೊಮ್ಮೆ ಭೇಟಿ ಮಾಡಲು ಡಿಕೆ ಶಿವಕುಮಾರ್ ಪ್ರಯತ್ನ ನಡೆಸುತ್ತಿದ್ದಾರೆ.

# ನಾಲ್ವರು ಭ್ರಷ್ಟರು ಲೋಕಾ ಬಲೆಗೆ,ಅಕ್ರಮ ಆಸ್ತಿ ಪತ್ತೆ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ದಾವಣಗೆರೆಯಲ್ಲಿ ಏಕಕಾಲಕ್ಕೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು ನಾಲ್ವರು ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿ ಪತ್ತೆಹಚ್ಚಿದ್ದಾರೆ.

ಬೆಂಗಳೂರು ಗ್ರಾಮಾಂತರದ ಕರ್ನಾಟಕ ರೆಸಿಡೆನ್ಸಿಯಲ್ ಎಜುಕೇಷನಲ್ ಇನ್ಸ್ಟಿಟ್ಯೂಷನ್ ಸೊಸೈಟಿ ಸೂಪರಟೆಂಡೆಂಟ್ ಇಂಜಿನಿಯರ್ ಹೆಚ್ ಎಂ ಜನಾರ್ದನ್,ಲೋಕೋಪಯೋಗಿ ಇಲಾಖೆಯ ರಾಷ್ಟ್ರೀಯ ಹೆದ್ದಾರಿ ಮುಖ್ಯ ಇಂಜಿನಿಯರ್ ಪುರುಷೋತ್ತಮ ದಾಸ್ ಹೆಗಡೆ,ದಾವಣಗೆರೆಯ ಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಅರ್ಜುನ ಆರ್.ಹೆಚ್ ಹಾಗೂ ಧಾರವಾಡದ ಭೂದಾಖಲೆಗಳ ಸರ್ವೇಯರ್ ಸೋಮಲಿಂಗಪ್ಪ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿಗಳಾಗಿದ್ದಾರೆ.

ಲೋಕೋಪಯೋಗಿ ಮುಖ್ಯ ಇಂಜಿನಿಯರ್ ಪುರುಷೋತ್ತಮ ದಾಸ್ ಕಚೇರಿ ಮನೆ ಸೇರಿ 11 ಕಡೆ ಲೋಕಾಯುಕ್ತ ಅಧಿಕಾ–ರಿಗಳು ದಾಳಿ ನಡೆಸಿದ್ದಾರೆ. ಹೆಚ್ ಎಂ









ಜನಾರ್ದನ್ ಅವರ ಕಚೇರಿ ಮನೆ ಮೇಲೆ ಬೆಳಿಗ್ಗೆಯಿಂದ ದಾಳಿ ನಡೆಸಿ ಅಕ್ರಮ ಆಸ್ತಿ ಪಾಸ್ತಿ ಪತ್ತೆಹಚ್ಚಿದ್ದಾರೆ.

ಮೈಸೂರಿನಲ್ಲಿ 5 ಕಡೆ, ಬೆಂಗಳೂರಿನಲ್ಲಿ 6 ಕಡೆ ದಾಳಿ ನಡೆಸಿದ್ದು, ಮಹತ್ವದ ದಾಖಲೆಗಳಿಗಾಗಿ ಶೋಧ ನಡೆಸಿದ್ದಾರೆ.

ಬೆಸ್ಕಾಂ ಇಂಜಿನಿಯರ್ ಆರ್.ಹೆಚ್ ಅರ್ಜುನ್ ಅವರ ಮನೆ ಹಾಗೂ ಕಚೇರಿ ಮೇಲೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದೆ.

ದಾವಣಗೆರೆಯ ಬೆಸ್ಕಾಂನ ಸಿವಿಲ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಜುನ್ ವಿರುದ್ಧ ಆದಾಯ ಮೀರಿ ಅಪಾರ ಪ್ರಮಾಣದ ಆಸ್ತಿ ಗಳಿಸಿರುವ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತ್ರತ್ವದ ತಂಡ ದಾಳಿ ನಡೆಸಿದೆ. ಅರ್ಜುನ್ ವಾಸವಿದ್ದ ದಾವಣಗೆರೆ ನಗರದ ನಿಟ್ಟುವಳ್ಳಿನಲ್ಲಿ ರೂಮ್, ಕಚೇರಿ ಹಾಗೂ ಶಿವಮೊಗ್ಗದ ಮನೆಯ ಮೇಲೆ ಏಕ ಕಾಲಕ್ಕೆ ದಾಳಿ ನಡೆಸಲಾಗಿದೆ. ಶಿವಮೊಗ್ಗದ ಮನೆಯಲ್ಲಿ ಆಸ್ತಿ ಪತ್ರ ಹಾಗೂ ಚಿನ್ನ ಬೆಳ್ಳಿ ಪತ್ತೆಯಾಗಿದ್ದು, ಇನ್ನಷ್ಟು ಮಹತ್ವದ ದಾಖಲೆಗಳನ್ನ ಪತ್ತೆಹಚ್ಚಲು ಅಧಿಕಾರಿಗಳು ಶೋಧ ಮುಂದುವರಿಸಿದ್ದಾರೆ. ಶಿವಮೊಗ್ಗದ ವಿಜಯನಗರ ಹಾಗೂ ಗೋಪಾಲಗೌಡ ಬಡಾವಣೆಯಲ್ಲಿರುವ ಅವರ ನಿವಾಸಗಳ ಮೇಲೆ ಅಧಿಕಾರಿಗಳ ತಂಡ ದಾಳಿ ಮಾಡಿದೆ.

ಸಾಗರ ಆನಂದಪುರ ಸಮೀಪದ ತಳಲೆ ಗ್ರಾಮದಲ್ಲಿರುವ ಅರ್ಜುನ ಅವರಿಗೆ ಸೇ–ರಿದ 2.5 ಎಕರೆ ಮತ್ತು 4.5 ಎಕರೆ ವಿಸ್ತೀರ್ಣದ ಬೃಹತ್ ಫಾರ್ಮ್ ಹೌಸ್‌ಗಳ ಮೇಲೂ

**ಬಲೆಗೆ ಬಿದ್ದವರು *ಹೆಚ್ ಎಂ ಜನಾರ್ದನ್ ಸೂಪರಟೆಂಡೆಂಟ್ ಇಂಜಿನಿಯರ್ ಕೆಆರ್ ಇಐಎಸ್ ಬೆಂಗಳೂರು ಗ್ರಾಮಾಂತರ *ಪುರುಷೋತ್ತಮ ದಾಸ್ ಹೆಗಡೆ ಮುಖ್ಯ ಇಂಜಿನಿಯರ್ ಲೋಕೋಪಯೋಗಿ ಬೆಂಗಳೂರು ಅರ್ಜುನ ಆರ್.ಹೆಚ್ ಎಇಇ ಬೆಸ್ಕಾಂ ದಾವಣಗೆರೆ ಸೋಮಲಿಂಗಪ್ಪ ಸರ್ವೇಯರ್ ಧಾರವಾಡ**

ಅಧಿಕಾರಿಗಳು ದಾಳಿ ಇಟ್ಟಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಚಂದ್ರಶೇಖರ್, ಇನ್ಸೆಕ್ಟರ್‌ಗಳಾದ ಪ್ರಭು ಸೂರೇನ್ ಮತ್ತು ಗುರುರಾಜ್ ಮೈಲಾರಿ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದ್ದು, ಮಹತ್ವದ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಸರ್ವೆ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರ ುವಸೋಮಲಿಂಗಪ್ಪ ಸಿದ್ದನಗೌಡರ್ ಅವರ ನಿವಾಸಗಳ ಮೇಲೆ ದಾಳಿ ನಡೆದಿದೆ.

ಧಾರವಾಡದ ಮುರಗೋಡ್ ನಿವಾಸ, ಭಾರತಿ ನಗರದ ನಿವಾಸ ಹಾಗೂ ಎಡಿಎಲ್‌ಆರ್ ಕಚೇರಿಯಲ್ಲಿ ಲೋಕಾಯುಕ್ತ ಪೊಲೀಸರು ತಪಾಸಣೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಎಸ್ಪಿ ಸಿದ್ದಲಿಂಗಪ್ಪ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದ್ದು, ಆಸ್ತಿ ವಿವರಗಳ ಕುರಿತು ಮಾಹಿತಿ ಕಲೆಹಾಕಲಾಗುತ್ತಿದೆ.

# ಕನ್ನಡ ಶಾಲೆಗಳನ್ನು ಉಳಿಸಲು ಸಂಕಲ್ಪ ಮಾಡಿ: ಶಾಸಕ ಎಂ ಟಿ ಕೃಷ್ಣಪ್ಪ.

ನೈಜ್ಯ ದೆಸೆ ನ್ಯೂಸ್

**ತುರುವೇಕೆರೆ: ಪೋಷಕರು ಮತ್ತು ಗ್ರಾಮಸ್ಥರುಗಳು ಸರ್ಕಾರಿ ಶಾಲೆಗಳಿಗೆ ಹೆಚ್ಚು ದಾಖಲಾತಿ ಮಾಡುವ ಮೂಲಕ ಕನ್ನಡ ಶಾಲೆಗಳನ್ನು ಉಳಿಸಲು ಸಂಕಲ್ಪ ಮಾಡಬೇಕೆಂದು ಶಾಸಕ ಎಂ.ಟಿ.ಕೃಷ್ಣಪ್ಪ ಹೇಳಿದರು.**

ತಾಲ್ಲೂಕಿನ ದಂಡಿನಶಿವರ ಗ್ರಾಮದ ಕೆಪಿಎಸ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪ್ರತಿಭಾಪುರಸ್ಕಾರ ಮತ್ತು ವಾರ್ಷಿಕೋತ್ಸವ ಸಮಾರಭದಲ್ಲಿ ಮಾತನಾಡಿದರು.

ಮಕ್ಕಳು ಮಾತೃಭಾಷೆಯಲ್ಲಿಯೇ ಶಿಕ್ಷಣ ಪಡೆದರೆ ಅವರ ವ್ಯಕ್ತಿತ್ವ ವಿಕಸನವಾಗುವುದರ ಜೊತೆಗೆ ಬೌದ್ಧಿಕ ಜ್ಞಾನ ವಿಕಾಸವೂ ತಾನಾಗಿಯೇ ವೃದ್ದಿಸುತ್ತದೆ. ಕನ್ನಡ ಮಾಧ್ಯಮ ಶಾಲೆಗಳಿಗೆ ಸರ್ಕಾರ ಹೊಸದಾಗಿ ಶಿಕ್ಷಕರ ನೇಮಕಾತಿ ಮಾಡುವಲ್ಲಿ



ನಿರ್ಲಕ್ಷ್ಯ ತಾಳಿದೆ ಹಾಗಾಗಿ ಮಕ್ಕಳ ಶೈಕ್ಷಣಿಕ ಗುಣಮಟ್ಟಕ್ಕೆ ದೊಡ್ಡ ಪೆಟ್ಟು ಬೀಳುತ್ತಿದೆ. ಇದರಿಂದ ವರ್ಷದಿಂದ ವರ್ಷಕ್ಕೆ ಮಕ್ಕಳ ದಾಖಲಾತಿಯ ಸಂಖ್ಯೆಯೂ ಕುಸಿಯುತ್ತದೆ. ಸರ್ಕಾರ ಹೊಸದಾಗಿ ಕೆಪಿಎಸ್ ಶಾಲೆಗಳನ್ನು ತೆರೆಯುತ್ತದೆ ಸಂತೋಷ. ಆದರೆ ಅದಕ್ಕೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ನೀಡುತ್ತಿಲ್ಲ ಎಂದು ಚಾಟಿ ಬೀಸಿದರು.

ಇದೇ ವೇಳೆ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿ–ತು. ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಬಡ ವಿದ್ಯಾರ್ಥಿ ಹೊನ್ನಮ್ಮಗೆ ಶಾಸಕರು 10 ಸಾವಿರ ಧನ ಸಹಾಯ ಮಾಡಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ಸೋಮಶೇಖರ್, ಇಸಿಒ ಸಿದ್ದಪ್ಪ, ತಾಲ್ಲೂಕು ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಪಾಪಣ್ಣ, ಗುಡಿಗೌಡರಾದ ಸಿದ್ದೇಗೌಡ, ಮುಖ್ಯ ಶಿಕ್ಷಕರಾದ ನಂರಾಜು ಮುನಿಯೂರು, ಧರ್ಮದರ್ಶಿ ವೆಂಕಟೇಶ್, ಮುಖಂಡರುಗಳಾದ ಮಧು, ಶಂಕರೇಗೌಡ, ರಾಜ್ ಕುಮಾರ್, ಶ್ರೀನಿವಾಸ್, ಇಮ್ರಾನ್, ಮಂಗಳಮ್ಮ, ಆರತಿ, ಸಿ.ಯೋಗಾನಂದ್ ಎಸ್.ಡಿ.ಎಂ.ಸಿ ಸದಸ್ಯರು, ಶಿಕ್ಷಕರು, ಪೋಷಕರು, ಗ್ರಾಮಸ್ಥರು ಭಾಗವಹಿಸಿದ್ದರು.

# ಹೊಸ ಕಾರ್ಮಿಕ ನೀತಿ ವಾಪಸ್ಸಿಗೆ ಆಗ್ರಹಿಸಿ ಪ್ರತಿಭಟನೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕೇಂದ್ರದ ನಾಲ್ಕು ಹೊಸ ಕಾರ್ಮಿಕ ಸಂಹಿತೆ ಹಿಂಪಡೆಯುವಂತೆ ಆಗ್ರಹಿಸಿ ಕೇಂದ್ರ ಕಾರ್ಮಿಕ ಸಂಘಗಳು ಕರೆ ನೀಡಿರುವ ದೇಶಾದ್ಯಂತ ಭಾರತ್ ಬಂದ್ ಗೆ ರಾಜ್ಯದಲ್ಲಿಯೂ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದ್ದು ಬಂದ್‌ನಿಂದಾಗಿ ರಾಜ್ಯದಲ್ಲಿ ಹಲವಾರು ಸೇವೆಗಳ ವ್ಯತ್ಯಯವಾಗಿದೆ.**

ರೈತ ಗುಂಪುಗಳು ಮತ್ತು ಎಡ ಪಕ್ಷಗಳ ಬೆಂಬಲ ದೊಂದಿಗೆ,ಭಾರತ್ ಬಂದ್ ರಾಜ್ಯಾದ್ಯಂತ ಬ್ಯಾಂಕಿಂಗ್, ಸಾರಿಗೆ ಮತ್ತು ಹಲವಾರು ದಿನನಿತ್ಯದ ಸೇವೆಗಳ ಮೇಲೆ ಭಾರಿ ಪರಿಣಾಮ ಬೀರಿದೆ, ಇದರಿಂದ ಹಲವಡೆ ಸಾರ್ವಜನಿಕರು, ಬ್ಯಾಂಕ್ ಗ್ರಾಹಕರು ಪರದಾಡುವಂತಾಗಿದೆ. ಬೆಂಗಳೂರಿನ ಟೌನ್‌ಹಾಲ್ ಮುಂಭಾಗ ಪ್ರತಿಭಟನೆ ನಡೆಸಿದ ಕಾರ್ಮಿಕರನ್ನು ಪೊಲೀಸರು ಬಂಧಿಸಿದರು.



ಬೆಂಗಳೂರು, ಮೈಸೂರು ಸೇರಿದಂತೆ ವಿವಿಧ ನಗರಗಳು, ಹುಬ್ಬಳ್ಳಿ ಮತ್ತು ಮಂಗಳೂರು ಪರಿಣಾಮ ಬೀರಿದೆ. ಪ್ರತಿಭಟನೆಗಳು ದೈನಂದಿನ ವೇಳಾಪಟ್ಟಿಗಳ ಮೇಲೆ ಪರಿಣಾಮ ಬೀರಿದೆ. ಕೇಂದ್ರ ಸರ್ಕಾರ ಪರಿಚಯಿಸಿದ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಪ್ರತಿಭಟಿಸಲು ಭಾರತ್ ಬಂದ್‌ಗೆ ಕರೆ ನೀಡಲಾಗಿದೆ, ಇದು ಅಸ್ತಿತ್ವದಲ್ಲಿರುವ 29 ಕಾರ್ಮಿಕ ಕಾನೂನು ಬದಲಾಯಿಸ ಲಾಗಿದೆ.

ಭಾರತೀಯ ರಾಷ್ಟ್ರೀಯ ಟ್ರೇಡ್ ಯೂನಿಯನ್ ಕಾಂಗ್ರೆಸ್,ಅಖಿಲ ಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್ ,ಹಿಂದ್ ಮಜ್ದೂರ್ ಸಭಾ,ಕೇಂದ್ರ ಭಾರತೀಯ ಟ್ರೇಡ್ ಯೂನಿಯನ್ಸ್, ಅಖಿಲ ಭಾರತ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್ ಟ್ರೇಡ್ ಯೂನಿಯನ್ ಸಮನ್ವಯ ಕೇಂದ್ರ ,ಸ್ವಯಂ ಉದ್ಯೋಗಿ ಮಹಿಳಾ ಸಂಘ ,ಅಖಿಲ ಭಾರತ ಕೇಂದ್ರೀಯ ಟ್ರೇಡ್ ಯೂನಿಯನ್ಸ್ ಮಂಡಳಿ, ಕಾರ್ಮಿಕ ಪ್ರಗತಿಶೀಲ ಒಕ್ಕೂಟ, ಮತ್ತು ಯುನೈಟೆಡ್ ಟ್ರೇಡ್ ಯೂನಿಯನ್ ಕಾಂಗ್ರೆಸ್ ಸೇ–ರಿದಂತೆ 10 ಕೇಂದ್ರೀಯ ಟ್ರೇಡ್ ಯೂನಿಯನ್‌ಗಳ ಜಂಟಿ ವೇದಿಕೆ ಮುಷ್ಕರಕ್ಕೆ ಕರೆ ನೀಡಿದೆ.

ಕಾರ್ಮಿಕನನ್ನು ಎಳೆದೊಯ್ಯುತ್ತಿರುವ ಪೊಲೀಸರು : ಸಾಮಾಜಿಕ ಭದ್ರತಾ ಕ್ರಮಗಳು ಮತ್ತು ಕಾರ್ಮಿಕ ಹಕ್ಕುಗಳ ರಕ್ಷಣೆಗಾಗಿ ಒತ್ತಾಯಿಸುವ ಗುರಿ ಹೊಂದಿದೆ ಎಂದು ಕಾರ್ಮಿಕ ಸಂಘಗಳ ನಾಯಕರು ತಿಳಿಸಿದ್ದಾರೆ. ಹಲವು ಸೇವೆಗಳ ವ್ಯತ್ಯಯ ವಿವಿಧ ಬ್ಯಾಂಕ್‌ಗಳ ಬಸ್‌ಗಳು, ಸರ್ಕಾರಿ ಕಚೇರಿಗಳು ಮತ್ತು ಕೆಲವು ಕೈಗಾರಿಕೆಗಳು ಅಡ್ಡಿಪಡಿಸಬಹುದು, ವಿಶೇಷವಾಗಿ ಬೆಂಗಳೂರಿನಲ್ಲಿ, ಒಕ್ಕೂಟಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತವೆ.

ಆಸ್ಪತ್ರೆಗಳು ಮತ್ತು ಆಂಬ್ಯುಲೆನ್ಸ್ ಕಾರ್ಯಾಚರಣೆಗಳಂತಹ ಅಗತ್ಯ ಸೇವೆಗಳಿಗೆ ವಿನಾಯಿತಿ ನೀಡಲಿದೆ. ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ವಲಯದ ಘಟಕಗಳು ಮುಚ್ಚುವಿಕೆ ಅಥ–'ವಾ ಅಡಚಣೆಗಳನ್ನು ಎದುರಿಸಬಹುದು. ಹೊರತಾಗಿ, ಕೆಎಸ್‌ಆರ್ಟಿಸಿ ಬಸ್‌ಗಳು ಮತ್ತು ಕೆಲವು ಸ್ಥಳೀಯ ಸಾರಿಗೆ ಸೇವೆಗಳ ಮೇಲೆ ಪರಿಣಾಮ ಬೀರಿದ್ದು ಮಿಶ್ರಪ್ರತಿಕ್ರಿಯೆ ವ್ಯಕ್ತವಾಗಿದೆ. ಆಸ್ಪತ್ರೆಗಳು, ಆಂಬ್ಯುಲೆನ್ಸ್‌ಗಳು, ಔಷಧಾಲಯಗಳು, ನೀರು ಮತ್ತು ವಿದ್ಯುತ್ ಪೂರೈಕೆ, ಅಗ್ನಿಶಾಮಕ ಸೇವೆಗಳು, ವಿಮಾನ ನಿಲ್ದಾಣಗಳು ಮತ್ತು ರೈಲುಗಳು ಸೇರಿದಂತೆ ಅಗತ್ಯ ಸೇವೆಗಳು ಸಾಮಾನ್ಯವಾಗಿ ಕಾರ್ಯನಿರ್ವಹಿಸಿದವು.